ಸಂಪುಟ : 11 ಸಂಚಿಕೆ: 102 ಪುಟ : 4+2 ಬೆಲೆ: 3.00 ಶನಿವಾರ ಮೇ 23 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 102 Pages : 4+2 Price : 3.00 Saturday May 23 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಮೂರು ತಿಂಗಳಿಂದ ಸಮರ್ಪಕ ನೀರಿಲ್ಲದೆ ಕಂಗಾಲಾದ ಕೋಟುಮಚಗಿ ಜನತೆ– ವಿನೂತನ ಪ್ರತಿಭಟನೆ ನಡೆಸಿದ ಗ್ರಾಮಸ್ಥರು

# ಕುಡಿಯುವ ನೀರಿಗಾಗಿ ಗ್ರಾಮಸ್ಥರ ಗರ್ಜನೆ!

■ವಿಜಯಸಾಕ್ಷಿ ಸುದ್ದಿ, ಗದಗ

ಕುಡಿಯುವ ನೀರಿಗಾಗಿ ಜನರು ಬೀದಿಗಿಳಿದು ಹೋರಾಟ ನಡೆಸುವ ದುಸ್ಥಿತಿ ಗದಗ ತಾಲೂಕಿನ ಕೊಟುಮಚಗಿ ಗ್ರಾಮದಲ್ಲಿ ನಿರ್ಮಾಣವಾಗಿದ್ದು, ಕಳೆದ ಮೂರು ತಿಂಗಳಿಂದ ಸಮರ್ಪಕ ಕುಡಿಯುವ ನೀರು ಪೂರೈಕೆಯಾಗದ ಹಿನ್ನೆಲೆಯಲ್ಲಿ ರೊಚ್ಚಿಗೆದ್ದ ಮಹಿಳೆಯರು, ಯುವಕರು ಹಾಗೂ ಗ್ರಾಮಸ್ಥರು ಗ್ರಾಮ ಪಂಚಾಯತ್ ಕಚೇರಿಗೆ ಬೀಗ ಹಾಕಿ ಉಗ್ರ ಪ್ರತಿಭಟನೆ ನಡೆಸಿದರು.

ಗ್ರಾಮ ಪಂಚಾಯತ್ ಕಚೇರಿ ಮುಂದೆ ಮುಳ್ಳಿನ ಗಿಡಗಳು ಹಾಗೂ ಕಲ್ಲುಗಳನ್ನು ಹಾಕಿ ಆಕ್ರೋಶ ವ್ಯಕ್ತಪಡಿಸಿದ ಪ್ರತಿಭಟನಾಕಾರರು, ಅಲ್ಲಿಯೇ ಅಡುಗೆ ಮಾಡುವ ಮೂಲಕ ವಿನೂತನ ಪ್ರತಿಭಟನೆ ನಡೆಸಿ ಅಧಿಕಾರಿಗಳ ವಿರುದ್ಧ ಕಿಡಿಕಾರಿದರು.

ಸುಮಾರು 10 ಸಾವಿರಕ್ಕೂ ಅಧಿಕ ಜನಸಂಖ್ಯೆ ಹೊಂದಿರುವ ಕೊಟುಮಚಗಿ ಗ್ರಾಮದಲ್ಲಿ ಹನಿ ಹನಿ ನೀರಿಗೂ ಜನರು ಪರದಾಡುವ ಸ್ಥಿತಿ ನಿರ್ಮಾಣವಾಗಿದೆ. ಮಹಿಳೆಯರು, ಮಕ್ಕಳು ಹಾಗೂ ವೃದ್ಧರು ನೀರಿಗಾಗಿ ಸಂಕಷ್ಟ ಅನುಭವಿಸುತ್ತಿದ್ದು, ಜಾನುವಾರುಗಳಿಗೂ ನೀರಿನ ಅಭಾವ ಎದುರಾಗಿದೆ.

ಗ್ರಾಮಕ್ಕೆ ಬೋರ್‌ವೆಲ್ ಹಾಗೂ ತುಂಗಭದ್ರಾ ನದಿಯಿಂದ ನೀರು ಪೂರೈಕೆ ಮಾಡಲಾಗುತ್ತಿದ್ದೂ, ಬೋರ್‌ವೆಲ್‌ಗಳ ಸಮರ್ಪಕ ನಿರ್ವಹಣೆ ಇಲ್ಲ. ಜೊತೆಗೆ




ತುಂಗಭದ್ರಾ ನೀರು ಕೂಡ ನಿಯಮಿತವಾಗಿ ಬರುತ್ತಿಲ್ಲ ಎಂದು ಗ್ರಾಮಸ್ಥರು ಆರೋಪಿಸಿದರು.

ಅಧಿಕಾರಿಗಳ ನಿರ್ಲಕ್ಷ್ಯದಿಂದ ಬೇಸತ್ತ ಮಹಿಳೆಯರು ಮತ್ತು ಯುವಕರು ಪಂಚಾಯತ್ ಕಚೇರಿ ಎದುರು ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. “ನಮಗೆ ಕುಡಿಯುವ ನೀರು ಕೊಡಿ, ಇಲ್ಲವೇ ಅಧಿಕಾರಿಗಳು ಗ್ರಾಮಕ್ಕೆ ಬರಲಿ” ಎಂದು ಆಗ್ರಹಿಸಿದರು.

ಮೂರು ತಿಂಗಳಿಂದ ನೀರಿಲ್ಲದೆ ನರಳುತ್ತಿದ್ದೇವೆ. ಅಧಿಕಾರಿಗಳಿಗೆ ಹಲವು ಬಾರಿ ಮನವಿ ಮಾಡಿದರೂ ಯಾವುದೇ ಸ್ಪಂದನೆ ಸಿಕ್ಕಿಲ್ಲ. ತಕ್ಷಣ ಸಮಸ್ಯೆ ಬಗೆಹರಿಸಬೇಕು ಎಂದು ಒತ್ತಾಯಿಸಿದರು.

ಗ್ರಾಮದ ನೀರಿನ ಸಮಸ್ಯೆ ಕುರಿತು ಕ್ಷೇತ್ರದ ಶಾಸಕ ಜಿ.ಎಸ್. ಪಾಟೀಲ್ ಸಹ ಗಮನ ಹರಿಸುತ್ತಿಲ್ಲ ಎಂದು ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದರು.

> “ಜನರ ಮೂಲಭೂತ ಹಕ್ಕಾದ ಕುಡಿಯುವ ನೀರೇ ಸಿಗದ ಪರಿಸ್ಥಿತಿ ನಿರ್ಮಾಣವಾಗಿದೆ. ಜಿಲ್ಲಾಡಳಿತದ ಮೌನವೇ ಜನರ ಆಕ್ರೋಶಕ್ಕೆ ಕಾರಣ.”
> – **ಶೇಖಪ್ಪ ದೇಸಾಯಿ,** ಗ್ರಾಮಸ್ಥ

ಬೇಸಿಗೆಯ ತಾಪಮಾನ ಏರಿಕೆಯಾಗುತ್ತಿರುವ ನಡುವೆಯೇ ಜನರ ಮೂಲಭೂತ ಅಗತ್ಯವಾದ ಕುಡಿಯುವ ನೀರಿನ ಸಮಸ್ಯೆ ಗಂಭೀರ ರೂಪ ಪಡೆದಿದೆ. ಆದರೂ ಜಿಲ್ಲಾಡಳಿತ ಹಾಗೂ ಜನಪ್ರತಿನಿಧಿಗಳ ಮೌನ ಗ್ರಾಮಸ್ಥರ ಆಕ್ರೋಶಕ್ಕೆ ಕಾರಣವಾಗಿದೆ.

ಈಗಾದರೂ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಎಚ್ಚೆತ್ತುಕೊಂಡು ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಲು ಕ್ರಮ ಕೈಗೊಳ್ಳಬೇಕೆಂಬ ಒತ್ತಾಯ ಕೇಳಿ ಬಂದಿದೆ.

> “ಮೂರು ತಿಂಗಳಿಂದ ನೀರಿಲ್ಲದೆ ನರಳುತ್ತಿದ್ದೇವೆ. ಅಧಿಕಾರಿಗಳಿಗೆ ಮನವಿ ಮಾಡಿದರೂ ಸ್ಪಂದನೆ ಇಲ್ಲ. ನಮಗೆ ನೀರು ಬೇಕು... ಭರವಸೆ ಬೇಡ.”
> – **ಉಮಾ ಪಾಟೀಲ್,** ಗ್ರಾಮಸ್ಥೆ

**ಖರ್ಚು ಮಾಡಿದ ಹಣ ಬಾರದಂತಾಗಿದೆ**

- ಮೂರು ತಿಂಗಳಿಂದ ಸಮರ್ಪಕ ನೀರು ಪೂರೈಕೆ ಇಲ್ಲ
- ಬೋರ್‌ವೆಲ್ ನಿರ್ವಹಣೆಯಲ್ಲಿ ನಿರ್ಲಕ್ಷ್ಯ
- ತುಂಗಭದ್ರಾ ನೀರು ನಿಯಮಿತವಾಗಿ ಬರುತ್ತಿಲ್ಲ
- ಮಹಿಳೆಯರು, ಮಕ್ಕಳು ನೀರಿಗಾಗಿ ಪರದಾಟ
- ಜಾನುವಾರುಗಳಿಗೂ ನೀರಿನ ಅಭಾವ
- ತಕ್ಷಣ ಕ್ರಮ ಕೈಗೊಳ್ಳುವಂತೆ ಆಗ್ರಹ

## ಮೇ 25ರಂದು ಜಿಲ್ಲಾ ಯೋಜನಾ ಸಮಿತಿ ಸಭೆ



■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ ಹಾಗೂ ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ.ಪಾಟೀಲ ಅವರ ಅಧ್ಯಕ್ಷತೆಯಲ್ಲಿ ಮೇ 25ರಂದು ಜಿಲ್ಲಾ ಯೋಜನಾ ಸಮಿತಿ ಸಭೆ ನಡೆಯಲಿದೆ.

ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಅಡಿಟೋರಿಯಂ ಸಭಾಂಗಣದಲ್ಲಿ ಬೆಳಿಗ್ಗೆ 10.30ಕ್ಕೆ ಸಭೆ ಆಯೋಜಿಸಲಾಗಿದ್ದು, ಜಿಲ್ಲೆಯ ವಿವಿಧ ಅಭಿವೃದ್ಧಿ ಯೋಜನೆಗಳ ಕುರಿತು ಚರ್ಚೆ ನಡೆಯಲಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೆಳ್ಳಟ್ಟಿ: ಮೇ 24ರಿಂದ 27ರವರೆಗೆ 3 ಫೇಸ್ ವಿದ್ಯುತ್ ಸಮಯ ಬದಲಾವಣೆ

■ವಿಜಯಸಾಕ್ಷಿ ಸುದ್ದಿ, ಗದಗ

110/33/11 ಕೆ.ವಿ. ಬೆಳ್ಳಟ್ಟಿ ಉಪಕೇಂದ್ರದಲ್ಲಿ ಹಾಲಿ ಇರುವ 10 ಎಂ.ವಿ.ಎ ಪರಿವರ್ತಕವನ್ನು 20 ಎಂ.ವಿ.ಎ ಪರಿವರ್ತಕದಿಂದ ಬದಲಾಯಿಸುವ ಕಾಮಗಾರಿಯನ್ನು ಮೇ 24ರಿಂದ 27ರವರೆಗೆ ಕೈಗೊಳ್ಳಲಾಗುತ್ತಿದೆ ಎಂದು ಹುವಿಸಕಂನಿ ಕಾರ್ಯ ಮತ್ತು ಪಾಲನೆ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ತಿಳಿಸಿದ್ದಾರೆ.

ಈ ಅವಧಿಯಲ್ಲಿ ಬೆಳ್ಳಟ್ಟಿ ಉಪಕೇಂದ್ರದಿಂದ ಹೊರಡುವ 11 ಕೆ.ವಿ. ಇ.ಐ.ಪಿ ಮಾರ್ಗಗಳಾದ ಎಫ್–7 ಹೊಸೂರು, ಎಫ್–9 ತಾರಿಕೊಪ್ಪ ಹಾಗೂ ಎಫ್–10 ಹೊಳಲಮ್ಮದೇವಿ ಫೀಡರ್‌ಗಳ 3 ಫೇಸ್ ವಿದ್ಯುತ್ ಪೂರೈಕೆ ಸಮಯದಲ್ಲಿ ಬದಲಾವಣೆ ಮಾಡಲಾಗುವುದು.

ಕಾಮಗಾರಿ ಹಿನ್ನೆಲೆಯಲ್ಲಿ ಎರಡು ಪಾಳಿಯಲ್ಲಿ ವಿದ್ಯುತ್ ಸರಬರಾಜು ನಡೆಯಲಿದ್ದು, ಸಾರ್ವಜನಿಕರು ಹಾಗೂ ರೈತರು ಸಹಕರಿಸುವಂತೆ ಮನವಿ ಮಾಡಲಾಗಿದೆ. ಕಾಮಗಾರಿ ವೇಳೆ ಸಂಬಂಧಿತ ವಿದ್ಯುತ್ ವಿತರಣಾ ಕೇಂದ್ರಗಳ ವ್ಯಾಪ್ತಿಯಲ್ಲಿ ಮಾರ್ಗ ನಿರ್ವಹಣಾ ಕಾರ್ಯಗಳನ್ನೂ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ತಹಸೀಲ್ದಾರ್ ಆರ್. ಕವಿತಾ, ಉಪ ತಹಸೀಲ್ದಾರ್ ಆಸಿಫ್ ಅಲಿ ಕಾರ್ಯಕ್ಕೆ ಜಿಲ್ಲಾಧಿಕಾರಿಗಳ ಶಭಾಷ್

# ರಾಜ್ಯದಲ್ಲೇ ನಂ.1 ಸಾಧನೆ ಮಾಡಿದ ಹಂಪಸಾಗರ ನಾಡಕಚೇರಿ





■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕು ವ್ಯಾಪ್ತಿಯ ಹಂಪಸಾಗರ ನಾಡಕಚೇರಿಯ ಅಟಲ್ ಜಿ ಜನಸ್ನೇಹಿ ಕೇಂದ್ರವು ವಿವಿಧ ಪ್ರಮಾಣಪತ್ರಗಳ ಅರ್ಜಿಗಳನ್ನು ನಿಗದಿತ ಅವಧಿಗೂ ಮುನ್ನ ಶೇ.100 ರಷ್ಟು ವಿಲೇವಾರಿ ಮಾಡಿ ರಾಜ್ಯ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದು ಗಮನ ಸೆಳೆದಿದೆ.

ಈ ಸಾಧನೆ ಹಿನ್ನೆಲೆಯಲ್ಲಿ ವಿಜಯನಗರ ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ಅವರು ಹಗರಿಬೊಮ್ಮನಹಳ್ಳಿ ತಹಸೀಲ್ದಾರ್ ಆರ್. ಕವಿತಾ ಅವರಿಗೆ ಅಭಿನಂದನಾ ಪತ್ರ ನೀಡಿ ಸನ್ಮಾನಿಸಿ ಶುಭ ಹಾರೈಸಿದರು.

ಅಟಲ್ ಜಿ ಜನಸ್ನೇಹಿ ಕೇಂದ್ರ ಯೋಜನೆಯಡಿ ಸಾರ್ವಜನಿಕರಿಗೆ ಪ್ರಮಾಣಪತ್ರಗಳನ್ನು ಶೀಘ್ರ ವಿತರಿಸುವಲ್ಲಿ ಹಂಪಸಾಗರ ನಾಡಕಚೇರಿ ಕಾರ್ಯಕ್ಷಮತೆ ಮೆರೆದಿದ್ದು, ಉಪ ತಹಸೀಲ್ದಾರ್ ಆಸಿಫ್ ಅಲಿ ಅವರಿಗೆ ರಾಜ್ಯ ಮಟ್ಟದಲ್ಲಿ ಪ್ರಥಮ ಸ್ಥಾನ ಲಭಿಸಿದೆ.

**354 ಅರ್ಜಿಗಳ ಶೇ.100 ವಿಲೇವಾರಿ**

ನವೆಂಬರ್ 2025ರ ಅವಧಿಯಲ್ಲಿ ನಾಡಕಚೇರಿಯಲ್ಲಿ ಸ್ವೀಕರಿಸಲಾದ 354 ಅರ್ಜಿಗಳನ್ನು ನಿಗದಿತ ಅವಧಿಗೂ ಮುನ್ನವೇ ಸಂಪೂರ್ಣವಾಗಿ ವಿಲೇವಾರಿ ಮಾಡುವ ಮೂಲಕ 10 ಸಿಗ್ಮಾ ಮಟ್ಟ ಸಾಧಿಸಲಾಗಿದೆ.

16.00 ವಿಲೇವಾರಿ ಸೂಚ್ಯಂಕದ ಪ್ರಕಾರ 17 ಪಟ್ಟು ವೇಗದಲ್ಲಿ ಅರ್ಜಿಗಳನ್ನು ವಿಲೇವಾರಿ ಮಾಡಿ, 1000ಕ್ಕಿಂತ ಕಡಿಮೆ ಅರ್ಜಿಗಳನ್ನು ಸ್ವೀಕರಿಸುವ ನಾಡಕಚೇರಿ ವಿಭಾಗದಲ್ಲಿ ರಾಜ್ಯ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆಯಲಾಗಿದೆ.

> “ಸಮಯಪಾಲನೆ, ಕಾರ್ಯತತ್ಪರತೆ ಮತ್ತು ಸಾರ್ವಜನಿಕ ಸೇವೆಯ ಬದ್ಧತೆಯಿಂದಲೇ ರಾಜ್ಯ ಮಟ್ಟದ ಸಾಧನೆ ಸಾಧ್ಯವಾಗಿದೆ.”
> – **ಕವಿತಾ ಎಸ್. ಮನ್ನಿಕೇರಿ, ಜಿಲ್ಲಾಧಿಕಾರಿ**

**ಸಿಬ್ಬಂದಿ ಕಾರ್ಯತತ್ಪರತೆಗೆ ಮೆಚ್ಚುಗೆ**

ಅಟಲ್ ಜಿ ಜನಸ್ನೇಹಿ ಕೇಂದ್ರಾಲಯದ ಪರವಾಗಿ ಹಂಪಸಾಗರ ನಾಡಕಚೇರಿ ಸಿಬ್ಬಂದಿ ತಂಡಕ್ಕೆ ಅಭಿನಂದನಾ ಪತ್ರ ನೀಡಲಾಗಿದ್ದು, ಸಿಬ್ಬಂದಿಯ ಸಹಕಾರ, ಕಾರ್ಯತತ್ಪರತೆ ಹಾಗೂ ಸಾರ್ವಜನಿಕ ಸೇವೆಯ ಮೇಲಿನ ಬದ್ಧತೆಯೇ ಈ ಸಾಧನೆಗೆ ಕಾರಣ ಎಂದು ಉಲ್ಲೇಖಿಸಲಾಗಿದೆ. ಮುಂದಿನ ದಿನಗಳಲ್ಲೂ ಇದೇ ರೀತಿಯ ಕಾರ್ಯಕ್ಷಮತೆ ಮತ್ತು ಜನಸೇವೆಯನ್ನು ಮುಂದುವರಿಸುವಂತೆ ಅಧಿಕಾರಿಗಳು ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಡಿಜಿಟಲ್ ಸಹಿಯೊಂದಿಗೆ ನೀಡಲಾದ ಅಭಿನಂದನಾ ಪತ್ರವು ಸಿಬ್ಬಂದಿಯಲ್ಲಿ ಮತ್ತಷ್ಟು ಉತ್ಸಾಹ ತುಂಬಿದೆ.

## ರಾಜ್ಯ ಕಾರ್ಯದರ್ಶಿಯಾಗಿ ಪ್ರಭುರಾಜಗೌಡ ನೇಮಕ



■ವಿಜಯಸಾಕ್ಷಿ ಸುದ್ದಿ, ಗದಗ

ಕನ್ನಡ ಜಾಗೃತಿ ವೇದಿಕೆಯ ರಾಜ್ಯ ಕಾರ್ಯದರ್ಶಿಯಾಗಿ ಗದಗ ಜಿಲ್ಲೆಯ ಯುವ ಮುಖಂಡ ಪ್ರಭುರಾಜಗೌಡ ವಿ. ಪಾಟೀಲ ಅವರನ್ನು ನೇಮಕ ಮಾಡಲಾಗಿದೆ.

ಚಿಕ್ಕಬಳ್ಳಾಪುರ ತಾಲೂಕಿನ ನಂದಿಬೆಟ್ಟದಲ್ಲಿ ಕನ್ನಡ ಜಾಗೃತಿ ವೇದಿಕೆ ವತಿಯಿಂದ ಆಯೋಜಿಸಿದ್ದ ರಾಜ್ಯ ಹಾಗೂ ಜಿಲ್ಲಾ ಪದಾಧಿಕಾರಿಗಳ ಒಂದು ದಿನದ ಕಾರ್ಯಾಗಾರದಲ್ಲಿ ಈ ಘೋಷಣೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಕನ್ನಡ ಜಾಗೃತಿ ವೇದಿಕೆಯ ರಾಜ್ಯಾಧ್ಯಕ್ಷ ಕೆ. ಮಂಜುನಾಥ ದೇವ ಅವರು ನೇಮಕಾತಿ ಆದೇಶ ನೀಡಿ ಮಾತನಾಡಿ, “ಪ್ರಭುರಾಜಗೌಡ ಪಾಟೀಲ ಅವರು ಕಳೆದ ಎರಡು ದಶಕಗಳಿಂದ ಕನ್ನಡ ನಾಡು–ನುಡಿ, ರೈತಪರ ಹೋರಾಟ ಹಾಗೂ ಸಮಾಜಮುಖಿ ಕಾರ್ಯಕ್ರಮಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದಾರೆ. ಅವರ ಸೇವೆಯನ್ನು ಪರಿಗಣಿಸಿ ರಾಜ್ಯ ಕಾರ್ಯದರ್ಶಿಯಾಗಿ ನೇಮಕ ಮಾಡಲಾಗಿದೆ” ಎಂದು ತಿಳಿಸಿದರು.

ಕಾರ್ಯಾಗಾರದಲ್ಲಿ ಕನ್ನಡ ಮುನ್ನಡೆ, ಕಾನೂನು ಅರಿವು, ಸಂಘಟನೆಯ ಉದ್ದೇಶಗಳು ಹಾಗೂ ಪದಾಧಿಕಾರಿಗಳ ಜವಾಬ್ದಾರಿಗಳ ಕುರಿತು ಚರ್ಚೆ ನಡೆಯಿತು.

ಈ ಸಂದರ್ಭದಲ್ಲಿ ರಾಜ್ಯ ಪದಾಧಿಕಾರಿಗಳು, ವಿವಿಧ ಜಿಲ್ಲೆ ಹಾಗೂ ತಾಲೂಕುಗಳ ಅಧ್ಯಕ್ಷರು, ಮಹಿಳಾ ಮುಖಂಡರು, ಕಾರ್ಯಕರ್ತರು ಉಪಸ್ಥಿತರಿದ್ದರು.

## “ಜಾತಿ ವಿಷಬೀಜ ಬಿತ್ತುವವರ ವಿರುದ್ಧ ಸಮಾವೇಶ”– ಉಡಚಪ್ಪ ಹಳ್ಳಿಕೇರಿ

# ಅಪಪ್ರಚಾರ ಬಿಟ್ಟು ಹಿಂದೂ ಸಮಾವೇಶಕ್ಕೆ ಬನ್ನಿ

■ವಿಜಯಸಾಕ್ಷಿ ಸುದ್ದಿ, ಗದಗ

“ಹಿಂದೂ ಸಮಾವೇಶವನ್ನು ಹತ್ತಿಕ್ಕಲು ಕೆಲವು ಪಟ್ಟಭದ್ರ ಹಿತಾಸಕ್ತಿಗಳು ಪ್ರಯತ್ನಿಸುತ್ತಿವೆ. ಕನ್ನೇರಿ ಶ್ರೀಗಳ ಬಗ್ಗೆ ಅಪಪ್ರಚಾರ ಮಾಡುವುದು ಸರಿಯಲ್ಲ. ಅಪಪ್ರಚಾರ ಬಿಟ್ಟು ಮೇ 31ರಂದು ನಡೆಯುವ ಹಿಂದೂ ಸಮಾವೇಶಕ್ಕೆ ಬನ್ನಿ” ಎಂದು ದಲಿತ ಮುಖಂಡ ಉಡಚಪ್ಪ ಹಳ್ಳಿಕೇರಿ ಕರೆ ನೀಡಿದರು.




ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ಸುದ್ದಿ ಗೋಷ್ಠಿಯಲ್ಲಿ ಮಾತನಾಡಿದ ಅವರು, “ಈ ಹಿಂದೆ ಶಿವಶರಣ ಮಾದರ ಚೆನ್ನಯ್ಯ ಶ್ರೀಗಳನ್ನು ಆರ್‌ಎಸ್‌ಎಸ್ ಸ್ವಾಮೀಜಿ ಎಂದು ನಿಂದಿಸಲಾಗಿತ್ತು. ನಾಡಿನ ಹಲವಾರು ಸ್ವಾಮೀಜಿಗಳ ಬಗ್ಗೆ ಹಗುರವಾಗಿ ವ್ ಾ ತ್ ನಾ ಡ್ ಲಾ ಗಿ ದ್ . ಬೆಳಿಗ್ಗೆ ಮೂಢನಂಬಿಕೆ ವಿರೋಧದ ಮಾತು ಹೇಳುವವರು ರಾತ್ರಿ ಮನೆಗೆ ಹೋಗಿ ಪೂಜೆ–ಪುನಸ್ಕಾರ ಮಾಡುತ್ತಾರೆ. ಸಮಾಜದಲ್ಲಿ ಒಡಕು ಮೂಡಿಸುವ ಕೆಲಸ ನಡೆಯುತ್ತಿದೆ” ಎಂದು ಸಾಹಿತಿ ಬಸವರಾಜ ಸೂಳಿಭಾವಿ ಹಾಗೂ ಅವರ ತಂಡದ ವಿರುದ್ಧ ಪರೋಕ್ಷವಾಗಿ ವಾಗ್ದಾಳಿ ನಡೆಸಿದರು.

ಜಿಲ್ಲೆಯ 68 ಸಂಘಟನೆಗಳ ಸಹಯೋಗದಲ್ಲಿ ಪಕ್ಷಾತೀತವಾಗಿ ಸಮಾವೇಶ ಆಯೋಜಿಸಲಾಗಿದೆ. ಜಿಲ್ಲೆಯ ಎಲ್ಲ ಸ್ವಾಮೀಜಿಗಳಿಗೂ ಆಹ್ವಾನ ನೀಡಲಾಗಿದೆ. ಕೆಲವರು ಜಾತಿ–ಜಾತಿಗಳ ನಡುವೆ ವಿಷಬೀಜ ಬಿತ್ತುವ ಕೆಲಸ ಮಾಡುತ್ತಿದ್ದಾರೆ. ಪ್ರಚೋದನಕಾರಿ ಹೇಳಿಕೆಗಳನ್ನು ನಿಲ್ಲಿಸಬೇಕು ಎಂದು ಅವರು ಆಗ್ರಹಿಸಿದರು.

“ಬಸವಣ್ಣನವರ ಹೆಸರಿನಲ್ಲಿ ಹಿಂದೂ ಧರ್ಮ ಒಡೆಯುವ ಹುನ್ನಾರದ ವಿರುದ್ಧ ಈ ಸಮಾವೇಶ ನಡೆಯುತ್ತಿದೆ. ‘ನಾವೆಲ್ಲರೂ ಒಂದು, ನಾವೆಲ್ಲರೂ ಹಿಂದೂ’ ಎಂಬ ಸಂದೇಶದೊಂದಿಗೆ ಸಮಾವೇಶ ಆಯೋಜಿಸಲಾಗಿದೆ” ಎಂದು ಹೇಳಿದರು.

**“ತೋಂಟದಾರ್ಯ ಮಠವನ್ನು ಜಾತಿಗೆ ಸೀಮಿತಗೊಳಿಸುವ ಯತ್ನ”**

ತೋಂಟದಾರ್ಯ ಮಠದ ಬಗ್ಗೆ ಅಪಾರ ಭಕ್ತಿ ಇದೆ. ಆದರೆ ಕೆಲವರು ಮಠವನ್ನು ಒಂದು ಜಾತಿಗೆ ಸೀಮಿತಗೊಳಿಸುವ ಪ್ರಯತ್ನ ಮಾಡುತ್ತಿದ್ದಾರೆ ಎಂದು ಆರೋಪಿಸಿದ ಅವರು, ತಮ್ಮನ್ನು ತಾವು ಚಿಂತಕರು ಎಂದು ಕರೆದುಕೊಳ್ಳುವವರು ಅನಗತ್ಯ ಟೀಕೆ ಮಾಡುವುದನ್ನು ನಿಲ್ಲಿಸಬೇಕು ಎಂದು ಹೇಳಿದರು. ಈ ವೇಳೆ ಮಂಜುನಾಥ ಕೊಟ್ನಿಕಲ್, ಕುಮಾರ ನಡಗೇರಿ, ಸತೀಶ್ ಕುಂಬಾರ, ರಾಘವೇಂದ್ರ ಪರಾಪೂರ, ಪಿ.ಎಸ್. ಕಾಳೆ, ಮೌನೇಶ್ ದಾಸರ, ಹುಲಗಪ್ಪ ವಾಲ್ಮೀಕಿ, ಅಶೋಕ ಭಜಂತ್ರಿ, ಈರಪ್ಪ ವಾಲ್ಮೀಕಿ, ಮಂಜುನಾಥ ಗುಡಿ, ಮಂಜುನಾಥ ಪೂಜಾರ, ಸ್ವರೂಪ ಹುಳ್ಳಿಕಾಶಿ, ವೆಂಕಟೇಶ್ ದೊಡ್ಡಮನಿ ಉಪಸ್ಥಿತರಿದ್ದರು.

# ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2026-27ನೇ ಸಾಲಿನ ಇಲಾಖೆಯ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳಿಗೆ ಹೊಸದಾಗಿ ಪ್ರವೇಶ ಬಯಸುವ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಕೆಗೆ ಜೂನ್ 8 ಕೊನೆಯ ದಿನವಾಗಿದೆ.

ಗದಗ ತಾಲೂಕಿನ ಮೆಟ್ರಿಕ್ ಪೂರ್ವ ಬಾಲಕ ಹಾಗೂ ಬಾಲಕಿಯರ ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಹಾಗೂ ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ.

ವಿದ್ಯಾರ್ಥಿಯ ಪೋಷಕರ ವಾರ್ಷಿಕ ಆದಾಯ ಮಿತಿ ಪ್ರವರ್ಗ-1 ಹಾಗೂ ಎಸ್‌ಸಿ/ಎಸ್‌ಟಿ ವಿದ್ಯಾರ್ಥಿಗಳಿಗೆ ರೂ. 2.50 ಲಕ್ಷ ಹಾಗೂ ಪ್ರವರ್ಗ-2ಎ, 2ಬಿ, 3ಎ, 3ಬಿ, ಇತರೆ ಹಿಂದುಳಿದ ವರ್ಗ ಹಾಗೂ ಇತರೆ ವಿದ್ಯಾರ್ಥಿಗಳಿಗೆ ರೂ. 1 ಲಕ್ಷ ನಿಗದಿಪಡಿಸಲಾಗಿದೆ.

ಸಲ್ಲಿಸಬೇಕಾದ ದಾಖಲೆಗಳ ವಿವರ ಹಾಗೂ ಸರ್ಕಾರದ ಆದೇಶಗಳ ಕುರಿತು ಇಲಾಖೆಯ ವೆಬ್‌ಸೈಟ್ bcwd.karnataka.gov.in ನಲ್ಲಿ ಮಾಹಿತಿ ಪಡೆಯಬಹುದಾಗಿದೆ.

ಅರ್ಜಿ ಸಲ್ಲಿಸುವ ವೇಳೆ ತಾಂತ್ರಿಕ ತೊಂದರೆಗಳಾದಲ್ಲಿ bcwdhelpline@gmail.com ಇ-ಮೇಲ್ ಮೂಲಕ ಅಥವಾ ಜಿಲ್ಲಾ ಹಾಗೂ ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿಗಳನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ 8050770004 ಗೆ ಕರೆ ಮಾಡಬಹುದಾಗಿದೆ. ಅಲ್ಲದೇ ಗದಗ ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಡಾ. ಬಸವರಾಜ ಎಂ. ಬಳ್ಳಾರಿ ಅವರನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

"ಎರಡು ಬಾರಿ ಹಾಜರಾತಿ ಕಡ್ಡಾಯ; ಇಲ್ಲದಿದ್ದರೆ ಕೂಲಿ ಹಣ ಇಲ್ಲ"- ಕೂಲಿಕಾರ್ಮಿಕರಿಗೆ ಎಚ್ಚರಿಕೆ

# ನರೇಗಾ ಕೆಲಸದಲ್ಲಿ ನಿರ್ಲಕ್ಷ್ಯ ಬೇಡ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಿನ ಕಡಕೋಳ ಹಾಗೂ ಛಬ್ಬಿ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಪ್ರಗತಿಯಲ್ಲಿರುವ ನರೇಗಾ ಹಾಗೂ ವಿವಿಧ ಸಮುದಾಯ ಕಾಮಗಾರಿಗಳ ಪರಿಶೀಲನೆಯನ್ನು ಶಿರಹಟ್ಟಿ ತಾಲೂಕ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಆರ್.ವಿ. ದೊಡ್ಡಮನಿ ಬುಧವಾರ ನಡೆಸಿ, ಕಾಮಗಾರಿಗಳ ಗುಣಮಟ್ಟ ಹಾಗೂ ಕೂಲಿ ಕಾರ್ಮಿಕರ ಹಾಜರಾತಿ ವ್ಯವಸ್ಥೆ ಕುರಿತು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಕಾಮಗಾರಿಗಳ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಅವರು, ಸ್ಥಳದಲ್ಲಿದ್ದ ನರೇಗಾ ಕೂಲಿಕಾರ್ಮಿಕರೊಂದಿಗೆ ಚರ್ಚಿಸಿ ಕೆಲಸದ ಪ್ರಮಾಣ, ಕೂಲಿ ಪಾವತಿ ಹಾಗೂ ಆರೋಗ್ಯದ ಬಗ್ಗೆ ಜಾಗೃತಿ ಮೂಡಿಸಿದರು.

ನಂತರ ಮಾತನಾಡಿದ ತಾಪಂ ಇಓ ಆರ್.ವಿ. ದೊಡ್ಡಮನಿ, "ಗ್ರಾಮ ಪಂಚಾಯತ್ ವತಿಯಿಂದ ನಡೆಯುತ್ತಿರುವ ಸಮುದಾಯದ ಕಾಮಗಾರಿಗಳ ಪರಿಶೀಲನೆ ನಡೆಸಲಾಗುತ್ತಿದೆ.



ಪ್ರತಿ ಕೂಲಿ ಕಾರ್ಮಿಕರು ಅಳತೆಗೆ ಅನುಗುಣವಾಗಿ ಕೆಲಸ ನಿರ್ವಹಿಸಿದರೆ 370 ರೂ.ಗಳ ಕೂಲಿ ದೊರೆಯುತ್ತದೆ. ಹಿರಿಯ ನಾಗರಿಕರು, ಗರ್ಭಿಣಿಯರು ಹಾಗೂ ಅಂಗವಿಕಲರಿಗೆ ಕೆಲಸದ ಪ್ರಮಾಣದಲ್ಲಿ ರಿಯಾಯಿತಿ ನೀಡಲಾಗುತ್ತದೆ" ಎಂದು ತಿಳಿಸಿದರು.

"ಎಲ್ಲ ಕೂಲಿ ಕಾರ್ಮಿಕರು ನಿಯಮಾನುಸಾರ ಕೆಲಸ ನಿರ್ವಹಿಸಿ ದಿನಕ್ಕೆ ಎರಡು ಬಾರಿ ಹಾಜರಾತಿ ಹಾಕಬೇಕು. ಎರಡು ಬಾರಿ ಹಾಜರಾತಿ ಹಾಕದಿದ್ದರೆ ಕೂಲಿ ಹಣ ಪಾವತಿಯಾಗುವುದಿಲ್ಲ. ಆದ್ದರಿಂದ ಎಲ್ಲರೂ ಜವಾಬ್ದಾರಿಯಿಂದ ಕೆಲಸ ನಿರ್ವಹಿಸಬೇಕು" ಎಂದು ಖಡಕ್ ಸೂಚನೆ ನೀಡಿದರು.

"ಬೇಸಿಗೆ ಹಿನ್ನೆಲೆ ಆರೋಗ್ಯದ ಕಡೆಗೂ ಹೆಚ್ಚಿನ ಗಮನಹರಿಸಬೇಕು. ಬೆಳಗಿನ ಜಾವವೇ ಕೆಲಸಕ್ಕೆ ಆಗಮಿಸಿ ಕೆಲಸದಲ್ಲಿ ತೊಡಗಬೇಕು. ಬಂದಂತಹ ಕೂಲಿ ಹಣವನ್ನು ಕೃಷಿ ಚಟುವಟಿಕೆಗಳು ಹಾಗೂ ಮಕ್ಕಳ ಶಿಕ್ಷಣದ ಅಗತ್ಯತೆಗಳಿಗೆ ಸದ್ಬಳಕೆ ಮಾಡಿಕೊಳ್ಳಬೇಕು" ಎಂದು ಸಲಹೆ ನೀಡಿದರು.

ಪರಿಶೀಲನಾ ವೇಳೆ ಕಡಕೋಳ ಗ್ರಾಮ ಪಂಚಾಯತ್ ಪಿಡಿಓ ಶಿವಾನಂದ ಮಾಳವಾಡ, ಛಬ್ಬಿ ಗ್ರಾಮ ಪಂಚಾಯತ್ ಪಿಡಿಓ ಸುಜಾತಾ ಕಪ್ಪಲಿ, ಟಿಐಇಸಿ ವಿರೇಶ ಪಟ್ಟಣಶೆಟ್ಟಿ, ತಾಂತ್ರಿಕ ಸಹಾಯಕ ಆಂಜನೇಯ, ಲಿಂಗರಾಜ, ಬಿಎಫ್‌ಟಿ, ಡಿಇಓ, ಕಾಯಕ ಬಂಧುಗಳು, ಗ್ರಾಮ ಪಂಚಾಯತ್ ಸಿಬ್ಬಂದಿ ಹಾಗೂ ನರೇಗಾ ಕೂಲಿಕಾರ್ಮಿಕರು ಉಪಸ್ಥಿತರಿದ್ದರು.

# ಭಯೋತ್ಪಾದನೆ ವಿರುದ್ಧ ಏಕತೆಯ ಸಂಕಲ್ಪ



■ವಿಜಯಸಾಕ್ಷಿ ಸುದ್ದಿ, ಗದಗ

ಹಿಂಸೆ ಮತ್ತು ಭಯೋತ್ಪಾದನೆಯನ್ನು ಮೆಟ್ಟಿ ಶಾಂತಿ, ಸೌಹಾರ್ದತೆ ಹಾಗೂ ರಾಷ್ಟ್ರೀಯ ಏಕತೆ ಕಾಪಾಡುವ ಸಂಕಲ್ಪದೊಂದಿಗೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಭಯೋತ್ಪಾದನಾ ವಿರೋಧಿ ದಿನಾಚರಣೆ ನಡೆಯಿತು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರ ಅಧ್ಯಕ್ಷತೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಅಧಿಕಾರಿಗಳು ಹಾಗೂ ಸಿಬ್ಬಂದಿಗೆ ಪ್ರತಿಜ್ಞಾ ವಿಧಿ ಬೋಧಿಸಲಾಯಿತು.

"ಅಹಿಂಸೆ ಮತ್ತು ಸಹನೆಗೆ ಹೆಸರಾದ ನಮ್ಮ ರಾಷ್ಟ್ರದ ಭವ್ಯ ಪರಂಪರೆಯಲ್ಲಿ ದೃಢ ವಿಶ್ವಾಸವಿರುವ ನಾವು, ಎಲ್ಲ ಬಗೆಯ ಭಯೋತ್ಪಾದನೆ ಹಾಗೂ ಹಿಂಸೆಯನ್ನು ಶಕ್ತಿ ಸಾಮರ್ಥ್ಯದಿಂದ ಎದುರಿಸಿ, ಶಾಂತಿ ಮತ್ತು ಸಾಮಾಜಿಕ ಸೌಹಾರ್ದತೆ ಕಾಪಾಡಲು ಬದ್ಧರಾಗಿದ್ದೇವೆ" ಎಂದು ಜಿಲ್ಲಾಧಿಕಾರಿ ಪ್ರತಿಜ್ಞಾ ವಚನ ಬೋಧಿಸಿದರು.

ಕಾರ್ಯಕ್ರಮದಲ್ಲಿ ಡಿವೈಎಸ್‌ಪಿ ಮಹಾಂತೇಶ್ ಸಜ್ಜನರ, ವಿವಿಧ ಇಲಾಖೆಗಳ ಅಧಿಕಾರಿಗಳು, ಕಂದಾಯ ಇಲಾಖೆಯ ಶಿರಸ್ತೇದಾರರು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

ಲಕ್ಕುಂಡಿಯಲ್ಲಿ ಜಾನಪದ ಉತ್ಸವ ಸಂಭ್ರಮ; ದೀಪ ನೃತ್ಯ, ಮಲ್ಲಕಂಬ, ಕೋಲಾಟ ಜನಮನ ಸೆಳೆತ

# "ಜಾನಪದ ಉಳಿದರೆ ಸಂಸ್ಕೃತಿ ಉಳಿಯುತ್ತದೆ"

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಗ್ರಾಮೀಣ ಭಾಗದ ಸಂಸ್ಕೃತಿ, ಸಂಪ್ರದಾಯ ಹಾಗೂ ಪರಂಪರೆಯನ್ನು ಅನಾವರಣಗೊಳಿಸುವ ಜಾನಪದ ಕಲೆಯನ್ನು ಉಳಿಸಿ ಬೆಳೆಸಲು ಜಾನಪದ ಕಲಾವಿದರನ್ನು ಪ್ರೋತ್ಸಾಹಿಸಬೇಕು ಎಂದು ಕೊಟ್ಟೂರೇಶ್ವರ ಮಠದ ಡಾ. ಕೊಟ್ಟೂರೇಶ್ವರ ಶ್ರೀಗಳು ಹೇಳಿದರು.

ಇಲ್ಲಿಯ ನುಲಿಚಂದಯ್ಯ ಜಾನಪದ ಕಲಾ ಮೇಳ, ಎಸ್.ಸಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ ಬೆಂಗಳೂರು ಇವರ ಸಹಯೋಗದಲ್ಲಿ ಮಾರುತಿ ನಗರದ ಸರ್ಕಾರಿ ದ್ವಿಮಾಧ್ಯಮ ಪ್ರಾಥಮಿಕ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಜಾನಪದ ಉತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

"ಜಾನಪದ ಕಲೆಯು ನಮ್ಮ ಜೀವನ ಶೈಲಿ, ನಡೆ-ನುಡಿಗಳನ್ನು ತಿದ್ದುವ ಉತ್ತಮ ಮಾಧ್ಯಮವಾಗಿದೆ.



ಜಾನಪದ ಕಲೆಯಿಂದ ಮನಸ್ಸು ಉಲ್ಲಾಸಗೊಳ್ಳುತ್ತದೆ. ಇಲ್ಲಿನ ಜಾನಪದ ಕಲೆ ದೇಶ-ವಿದೇಶಗಳಲ್ಲಿ ಖ್ಯಾತಿ ಪಡೆದಿದೆ. ಶರಣ ಕಾಯಕಜೀವಿ ನುಲಿಚಂದಯ್ಯವರ ಹೆಸರಿನಲ್ಲಿ ಜಾನಪದ ಮೇಳ ರಚಿಸಿಕೊಂಡು ಕಲೆಯನ್ನು ಉಳಿಸಿ ಬೆಳೆಸಲು ಶ್ರಮಿಸುತ್ತಿರುವುದು ಶ್ಲಾಘನೀಯ ಕಾರ್ಯ" ಎಂದು ಹೇಳಿದರು.

ತಾ.ಪಂ ಮಾಜಿ ಸದಸ್ಯ ಮಹೇಶ ಮುಸ್ಕಿನಭಾವಿ ಮಾತನಾಡಿ, "ವಿಜ್ಞಾನ ಮತ್ತು ತಂತ್ರಜ್ಞಾನದ ಯುಗದಲ್ಲಿ ಜಾನಪದ ಕಲೆ ಮರೆಮಾಚುತ್ತಿದೆ. ಇಂತಹ ಕಲೆಯನ್ನು ಉಳಿಸಿ ಬೆಳೆಸುತ್ತಿರುವ ನುಲಿಚಂದಯ್ಯ ಜಾನಪದ ಮೇಳದ ಕಾರ್ಯಕ್ಕೆ ಗ್ರಾಮಸ್ಥರು ಬೆಂಬಲ ನೀಡಬೇಕು" ಎಂದು ಕರೆ ನೀಡಿದರು.

> ಜಿಲ್ಲೆಯ ವಿವಿಧ ಭಾಗಗಳಿಂದ ಆಗಮಿಸಿದ್ದ ಕಲಾವಿದರು ಪ್ರದರ್ಶಿಸಿದ ಭಕ್ತಿ ಸಂಗೀತ, ದೀಪ ನೃತ್ಯ, ಸುಗಮ ಸಂಗೀತ, ಡೊಳ್ಳಿನ ಪದ, ಕೋಲಾಟ, ಜನಪದ ಸಂಗೀತ, ತತ್ವಪದ, ಮಲ್ಲಕಂಬ, ಜೋಗುತಿ ನೃತ್ಯ, ಭಜನೆ ಹಾಗೂ ಗೀಗೀ ಪದ ಕಾರ್ಯಕ್ರಮಗಳು ಜನಮನ ಸೆಳೆದವು.

ಗದಗ ಜಿಲ್ಲಾ ಎಸ್‌ಸಿ/ಎಸ್‌ಟಿ ಸಲಹಾ ಸಮಿತಿಯ ನಾಮ ನಿರ್ದೇಶಿತ ಸದಸ್ಯ ಬಸವರಾಜ ಮುಳ್ಳಾಳ ಮಾತನಾಡಿ, "ಇಂದಿನ ಯುವಕರು ಮೊಬೈಲ್ ಹಾಗೂ ಟಿ.ವಿ ಮಾಧ್ಯಮಗಳಿಂದ ದೂರವಿದ್ದು, ನಮ್ಮ ನಾಡಿನ ಸಂಸ್ಕೃತಿ ಮತ್ತು ಸಂಪ್ರದಾಯವನ್ನು ಗೌರವಿಸುವ ಜಾನಪದ ಕಲೆಯ ಮಹತ್ವ ಅರಿಯಬೇಕು" ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಪಿಯುಸಿ ದ್ವಿತೀಯ ಹಾಗೂ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳು ಮತ್ತು ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಗಣ್ಯರನ್ನು ಸನ್ಮಾನಿಸಲಾಯಿತು.

ಚನ್ನಬಸಪ್ಪ ಭಜಂತ್ರಿ ಅಧ್ಯಕ್ಷತೆ ವಹಿಸಿದ್ದರು. ಪಿ.ಕೆ.ಪಿ.ಎಸ್ ನೂತನ ಅಧ್ಯಕ್ಷ ದೇವಪ್ಪ ಖಂಡು, ಕುಶ ಕವಲೂರು, ಗ್ರಾಮ ಪಂಚಾಯತ್ ಮಾಜಿ ಸದಸ್ಯರಾದ ಲಕ್ಷ್ಮಣ ಗುಡಸಲಮನಿ, ಶಿವಪ್ಪ ಬಳಿಗೇರ, ಬಿಜೆಪಿ ಲಕ್ಕುಂಡಿ ಮಂಡಲ ಅಧ್ಯಕ್ಷ ಪ್ರಕಾಶ ಅರಹುಣಶಿ, ತಿಪ್ಪಣ್ಣ ಅಂಬಕ್ಕಿ, ಎಸ್‌ಡಿಎಂಸಿ ಅಧ್ಯಕ್ಷ ಮಹಾಂತೇಶ ಗುರಿಕಾರ, ಬಸವರಾಜ ಬಳಿಗೇರ, ಸಿದ್ದಣ್ಣ ಮಂಗಳೂರು, ವಿನಾಯಕ ಡಿಗ್ಗಾವಿ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ನುಲಿಚಂದಯ್ಯ ಜಾನಪದ ಕಲಾ ಮೇಳದ ಅಧ್ಯಕ್ಷ ಶಿವಪ್ಪ ಭಜಂತ್ರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ವಿ.ಸಿ. ಕುಂಬಾರ ಸ್ವಾಗತಿಸಿದರು. ಶಿಕ್ಷಕ ಮುತ್ತುರಾಜ್ ಗಡ್ಡಿ ಕಾರ್ಯಕ್ರಮ ನಿರೂಪಿಸಿದರು. ಕೊಟ್ರಯ್ಯ ನಾಗಾವಿಮಠ ವಂದಿಸಿದರು.

# ಸಿಸಿ ರಸ್ತೆ ಕಾಮಗಾರಿಗೆ ಶೈಲಾ ಬಾಕಳೆ ಚಾಲನೆ

■ವಿಜಯಸಾಕ್ಷಿ ಸುದ್ದಿ, ಗದಗ

ವಾರ್ಡ್ ನಂ.31ರ ಕಿಲ್ಲಾ ಸಮೀಪ ವಾರ್ಡ್ ಸದಸ್ಯೆ ಶ್ರೀಮತಿ ಶೈಲಾ ಬಾಕಳೆ ಅವರ ಅನುದಾನದಲ್ಲಿ ಕೈಗೆತ್ತಿಕೊಳ್ಳಲಾಗಿರುವ ಸಿಸಿ ರಸ್ತೆ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಲಾಯಿತು.

ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ನಗರಸಭಾ ಸದಸ್ಯೆ ಶೈಲಾ ಬಾಕಳೆ, "ಈ ಭಾಗದ ನಿವಾಸಿಗಳು ಬಹಳ ದಿನಗಳಿಂದ ಸಿಸಿ ರಸ್ತೆ ನಿರ್ಮಾಣಕ್ಕೆ ಮನವಿ ಮಾಡುತ್ತಿದ್ದರು. ಇದೀಗ ಕಾಮಗಾರಿಗೆ ಚಾಲನೆ ನೀಡಲಾಗಿದೆ. ಗುತ್ತಿಗೆದಾರರು ಉತ್ತಮ ಗುಣಮಟ್ಟದ ರಸ್ತೆ ನಿರ್ಮಿಸಿ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಕೆಲಸ



ನಿರ್ವಹಿಸಬೇಕು" ಎಂದು ಸೂಚಿಸಿದರು.

ಕಾರ್ಯಕ್ರಮದಲ್ಲಿ ರಾಜ್ಯ ಒಬಿಸಿ ಕಾರ್ಯದರ್ಶಿ ಸುಧೀರ್ ಕಾಟಿಗಾರ್, ರಾಜ್ಯ ಅಲ್ಪಸಂಖ್ಯಾತ ಮೋರ್ಚಾ ಕಾರ್ಯದರ್ಶಿ ಇರ್ಷಾದ್ ಮಾನ್ವಿ, ಬಿಜೆಪಿ ಹಿರಿಯ ಮುಖಂಡ ಜಗನ್ನಾಥ ಬಾಂಡಗೆ, ಜಿಲ್ಲಾ ಅಲ್ಪಸಂಖ್ಯಾತ ಮೋರ್ಚಾ ಪ್ರಧಾನ ಕಾರ್ಯದರ್ಶಿ ನಾಸಿರ್ ನರೇಗಲ್, ಶ್ರೀಮತಿ ಶೋಭಾ ಬಾಂಡಗೆ, ವಿಜಯಲಕ್ಷ್ಮಿ ಮಾನ್ವಿ, ಶ್ರೀಮತಿ ಲಕ್ಷ್ಮಿ ಹಡಪದ್, ಶ್ರೀಮತಿ ಮಡಿವಾಳರ, ರವಿ ಚವಾಣ್, ನಾರಾಯಣ ಟಿಕಂದರ್ ಸೇರಿದಂತೆ ಬಿಜೆಪಿ ಕಾರ್ಯಕರ್ತರು ಹಾಗೂ ಕಿಲ್ಲಾ ನರಗರಡಿ ಓಣಿಯ ನಾಗರಿಕರು ಉಪಸ್ಥಿತರಿದ್ದರು.

# ಪ್ರಾಥಮಿಕ ಶಾಲಾ ಶಿಕ್ಷಕರ ಸಂಘಕ್ಕೆ ಪದಾಧಿಕಾರಿಗಳ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ಗದಗ

ಶಿರಹಟ್ಟಿ ತಾಲೂಕಿನ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ 2026-31ನೇ ಅವಧಿಗೆ ಅಧ್ಯಕ್ಷರಾಗಿ ಶರಣಬಸವ ಕೆ. ಪಾಟೀಲ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಅಲ್ಲದೆ, ಪ್ರಧಾನ ಕಾರ್ಯದರ್ಶಿಯಾಗಿ ದ್ಯಾಮಪ್ಪ ದ್ಯಾಮಣ್ಣವರ ಹಾಗೂ ಕೋಶಾಧ್ಯಕ್ಷ (ಖಜಾಂಚಿ)ರಾಗಿ ಮೋಹನ ಜಿ. ಮಾಂಡ್ರೆ ಅವರು ಕೂಡ ಅವಿರೋಧವಾಗಿ ಆಯ್ಕೆಯಾಗಿದ್ದು, ಶಿಕ್ಷಕರ ವಲಯದಲ್ಲಿ ಸಂತಸ ಮೂಡಿಸಿದೆ.

ನೂತನ ಪದಾಧಿಕಾರಿಗಳು ಶಿಕ್ಷಕರ ಪರ ಧ್ವನಿಯಾಗಿ ಕಾರ್ಯನಿರ್ವಹಿಸಿ ಸಂಘದ ಅಭಿವೃದ್ಧಿಗೆ ಶ್ರಮಿಸಲಿ ಎಂದು ಶಿಕ್ಷಣ ಇಲಾಖೆ ಅಧಿಕಾರಿಗಳು ಹಾಗೂ ಶಿಕ್ಷಕ ವೃಂದ ಶುಭ ಹಾರೈಸಿದ್ದಾರೆ.

ಕ್ಷೇತ್ರ ಶಿಕ್ಷಣಾಧಿಕಾರಿ ಎಚ್. ನಾಣಕಿನಾಯ್ಕ, ಕ್ಷೇತ್ರ ಸಮನ್ವಯಾಧಿಕಾರಿ ಬಿ.ಎಸ್. ಭಜಂತ್ರಿ, ನೂತನ ನಿರ್ದೇಶಕರು, ಗದಗ ಜಿಲ್ಲಾ ಸಂಘಟನಾ ಕಾರ್ಯದರ್ಶಿ ಎಸ್.ಎಫ್. ಮಠದ, ತಾಲೂಕು ನಿರ್ದೇಶಕಿ ಯಾಸ್ಮಿನ್ ಶಿರಹಟ್ಟಿ, ಸರಸ್ವತಿ ಅಪ್ಪಣ್ಣವರ, ಪರಪ್ಪ ಕರಿಗಾರ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ಶಿಕ್ಷಣ ಸಂಯೋಜಕರು, ಕ್ಷೇತ್ರ ಸಂಪನ್ಮೂಲ ಕೇಂದ್ರದ ಬಿಆರ್‌ಪಿ ಮತ್ತು ಸಿಆರ್‌ಪಿ ಸಿಬ್ಬಂದಿ ಸೇರಿದಂತೆ ತಾಲೂಕಿನ ಶಿಕ್ಷಕ-ಶಿಕ್ಷಕಿಯರು ನೂತನ ಪದಾಧಿಕಾರಿಗಳಿಗೆ ಅಭಿನಂದನೆ ಸಲ್ಲಿಸಿದ್ದಾರೆ.

# ಅಲ್ಪಸಂಖ್ಯಾತ ವಿದ್ಯಾರ್ಥಿನಿಯರಿಗೆ ಸುವರ್ಣಾವಕಾಶ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗೆ ಹೊಸದಾಗಿ ಮಂಜೂರಾಗಿರುವ ಮಹಿಳಾ ಪದವಿ ಪೂರ್ವ ವಸತಿ ರಹಿತ ಕಾಲೇಜಿಗೆ 2025-26ನೇ ಸಾಲಿನ ಪ್ರಥಮ ಪಿ.ಯು.ಸಿ. ಪ್ರವೇಶಕ್ಕಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಬೆಟಗೇರಿಯ ಈದ್ಗಾ ಕಮಿಟಿ ಆವರಣದಲ್ಲಿರುವ ಸ್ವಾಮಿ ವಿವೇಕಾನಂದ ರಸ್ತೆ, ರೈಲ್ವೆ ಸ್ಟೇಷನ್ ಸಮೀಪದ ಅಮನ್ ಸ್ಕೂಲ್ ಕಟ್ಟಡದಲ್ಲಿ ಕಾಲೇಜು ಪ್ರಾರಂಭವಾಗುತ್ತಿದೆ. ಕಲಾ, ವಿಜ್ಞಾನ ಹಾಗೂ ವಾಣಿಜ್ಯ ವಿಭಾಗಗಳಲ್ಲಿ ಪ್ರವೇಶ ಕಲ್ಪಿಸಲಾಗುತ್ತಿದ್ದು, ಪ್ರತಿ ವಿಭಾಗಕ್ಕೂ ದಾಖಲಾತಿ ಪ್ರಕ್ರಿಯೆ ಆರಂಭಗೊಂಡಿದೆ.

ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿನಿಯರಿಗೆ ಶೇ.75ರಷ್ಟು ಹಾಗೂ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಇತರೆ ಹಿಂದುಳಿದ ವರ್ಗಗಳ ವಿದ್ಯಾರ್ಥಿನಿಯರಿಗೆ ಶೇ.25ರಷ್ಟು ಪ್ರವೇಶ ಮೀಸಲಿರಿಸಲಾಗಿದೆ.

ಪ್ರಥಮ ಪಿ.ಯು.ಸಿ. ಪ್ರವೇಶ ಪಡೆಯಲು 10ನೇ ತರಗತಿಯಲ್ಲಿ ಉತ್ತೀರ್ಣರಾಗಿರಬೇಕು. ಜೊತೆ-ಗೆ ಕುಟುಂಬದ ವಾರ್ಷಿಕ ಆದಾಯ ರೂ.2.50 ಲಕ್ಷ ಮೀರಿರಬಾರದು ಎಂದು ಇಲಾಖೆ ತಿಳಿಸಿದೆ.

ಪ್ರವೇಶ ಬಯಸುವ ವಿದ್ಯಾರ್ಥಿನಿಯರು ಗದಗದ ಅಲ್ಪಸಂಖ್ಯಾತರ ಜಿಲ್ಲಾ ಕಚೇರಿ ಹಾಗೂ ಮಾಹಿತಿ ಕೇಂದ್ರಕ್ಕೆ ಭೇಟಿ ನೀಡಿ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಮೇ 27 ಕೊನೆಯ ದಿನವಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮೌಲಾನಾ ಆಜಾದ್ ಭವನ, ಜಿಲ್ಲಾ ನ್ಯಾಯಾಲಯದ ಎದುರುಗಡೆಯಲ್ಲಿರುವ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೇ 25ರಂದು ನೇರ ಸಂದರ್ಶನ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಗದಗ ವತಿಯಿಂದ ಮೇ 25ರಂದು ನೇರ ಸಂದರ್ಶನ ಆಯೋಜಿಸಲಾಗಿದೆ.

ಗದಗ ನಗರದ ಹೊಸ ಬಸ್ ನಿಲ್ದಾಣ ರಸ್ತೆ, ಯಮಹಾ ಶೋರೂಂ ಎದುರಿನ ಟಾಟಾ ಕ್ಯಾಪಿಟಲ್ ಕಚೇರಿಯಲ್ಲಿ ಸೋಮವಾರ ಬೆಳಗ್ಗೆ 10 ಗಂಟೆಗೆ ಸಂದರ್ಶನ ನಡೆಯಲಿದೆ ಎಂದು ಜಿಲ್ಲಾ ಉದ್ಯೋಗಾಧಿಕಾರಿ ಬಸವಂತ ಪಿ.ಎನ್. ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ನೇರ ಸಂದರ್ಶನದಲ್ಲಿ ಟಾಟಾ ಕ್ಯಾಪಿಟಲ್ ಸಂಸ್ಥೆ ಭಾಗವಹಿಸಲಿದ್ದು, ಲೋನ್ ಆಫೀಸರ್ ಹುದ್ದೆಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುತ್ತದೆ.

ಪಿಯುಸಿ, ಯಾವುದೇ ಪದವಿ ಹಾಗೂ ಉನ್ನತ ಶಿಕ್ಷಣ ಪಡೆದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ. ಅಭ್ಯರ್ಥಿಗಳ ವಯೋಮಿತಿ 18ರಿಂದ 30 ವರ್ಷಗಳೊಳಗಿರಬೇಕು. ಪುರುಷ ಅಭ್ಯರ್ಥಿಗಳಿಗೆ ಮಾತ್ರ ಅವಕಾಶ ಕಲ್ಪಿಸಲಾಗಿದೆ.

ಆಯ್ಕೆಯಾದ ಅಭ್ಯರ್ಥಿಗಳಿಗೆ ಗದಗ ಹಾಗೂ ಮುಂಡರಗಿ ಪ್ರದೇಶಗಳಲ್ಲಿ ಕೆಲಸ ನೀಡಲಾಗುತ್ತದೆ. ಸಂದರ್ಶನಕ್ಕೆ ಆಗಮಿಸುವ ಅಭ್ಯರ್ಥಿಗಳು ತಮ್ಮ ವಿದ್ಯಾರ್ಹತೆಯ ಅಂಕಪಟ್ಟಿಗಳ ಜೆರಾಕ್ಸ್ ಪ್ರತಿಗಳು, ಎರಡು ರೆಸ್ಯೂಮ್ (ಬಯೋಡಾಟಾ), ಆಧಾರ್ ಕಾರ್ಡ್ ಜೆರಾಕ್ಸ್ ಪ್ರತಿಯೊಂದಿಗೆ ಹಾಜರಾಗಬೇಕು ಎಂದು ಸೂಚಿಸಲಾಗಿದೆ. ನೇರ ಸಂದರ್ಶನದಲ್ಲಿ ಭಾಗವಹಿಸುವ ಅಭ್ಯರ್ಥಿಗಳಿಗೆ ನೋಂದಣಿ ಕಡ್ಡಾಯವಾಗಿದ್ದು, ಸಂದರ್ಶನದ ದಿನವೇ ನೋಂದಣಿ ಮಾಡಿಸಿಕೊಳ್ಳಬಹುದಾಗಿದೆ. ಯುವನಿಧಿ ಯೋಜನೆಯ ಫಲಾನುಭವಿಗಳು ಈ ನೇರ ಸಂದರ್ಶನದಲ್ಲಿ ಕಡ್ಡಾಯವಾಗಿ ಭಾಗವಹಿಸುವಂತೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಮನವಿ ಮಾಡಿದೆ. ಹೆಚ್ಚಿನ ಮಾಹಿತಿಗಾಗಿ 6364931181 ಹಾಗೂ 6363330688 ಸಂಖ್ಯೆಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

ನಕಲಿ ಬೀಜ-ಗೊಬ್ಬರಕ್ಕೆ ಬ್ರೇಕ್; ಲಿಂಕ್ ಗೊಬ್ಬರ ಮಾರಿದರೆ ಲೈಸನ್ಸ್ ರದ್ದು

# ಮುಂಗಾರು ಮುನ್ನವೇ ಜಿಲ್ಲಾಡಳಿತ ಅಲರ್ಟ್!

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಮುಂಗಾರು ಹಂಗಾಮು ಆರಂಭಕ್ಕೂ ಮುನ್ನವೇ ಧಾರವಾಡ ಜಿಲ್ಲಾಡಳಿತ ಕೃಷಿ ಕ್ಷೇತ್ರದಲ್ಲಿ ಕಟ್ಟೆಚ್ಚರ ವಹಿಸಿದ್ದು, ರೈತರಿಗೆ ಅಗತ್ಯವಿರುವ ಬೀಜ ಹಾಗೂ ರಸಗೊಬ್ಬರಗಳ ಸಮರ್ಪಕ ದಾಸ್ತಾನು ಲಭ್ಯವಿದೆ ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್. ಭರವಸೆ ನೀಡಿದರು. ನಕಲಿ ಬೀಜ, ಕಳಪೆ ಗೊಬ್ಬರ, ಹೆಚ್ಚಿನ ದರ ವಸೂಲಿ ಹಾಗೂ ಲಿಂಕ್ ಗೊಬ್ಬರ ಮಾರಾಟದ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದಾಗಿ ಎಚ್ಚರಿಕೆ ನೀಡಿದರು.

ಜಿಲ್ಲಾಧಿಕಾರಿಗಳು ಗುರುವಾರ ಕೃಷಿ ಇಲಾಖೆ ಅಧಿಕಾರಿಗಳು, ರೈತ ಮುಖಂಡರು ಹಾಗೂ ರಸಗೊಬ್ಬರ ಮಾರಾಟಗಾರರೊಂದಿಗೆ ತುರ್ತು ವಿಡಿಯೋ ಸಂವಾದ ಸಭೆ ನಡೆಸಿ ಮುಂಗಾರು ಸಿದ್ಧತೆಗಳ ಸಮಗ್ರ ಪರಿಶೀಲನೆ ನಡೆಸಿದರು.

ಮುಂಗಾರು ಹಂಗಾಮಿನಲ್ಲಿ ರೈತರಿಗೆ ಯಾವುದೇ ರೀತಿಯ ಕೊರತೆ ಉಂಟಾಗದಂತೆ ಜಿಲ್ಲಾಡಳಿತ ಮುನ್ನೆಚ್ಚರಿಕಾ ಕ್ರಮ ಕೈಗೊಂಡಿದೆ. ಕೃಷಿ ಇಲಾಖೆ ಅಧಿಕಾರಿಗಳು ರೈತ ಸಂಪರ್ಕ ಕೇಂದ್ರಗಳು ಹಾಗೂ ಗೊಬ್ಬರ ಮಾರಾಟ ಮಳಿಗೆಗಳಿಗೆ ನಿರಂತರ ಭೇಟಿ ನೀಡಿ ಪರಿಶೀಲನೆ ನಡೆಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

ಮಧ್ಯಪ್ರಾಚ್ಯ ಯುದ್ಧದ ಪರಿಣಾಮ ರಾಷ್ಟ್ರ ಮಟ್ಟದಲ್ಲಿ ರಸಗೊಬ್ಬರ ಪೂರೈಕೆಯಲ್ಲಿ ಕೆಲವೊಂದು ವಿಳಂಬ ಉಂಟಾಗುತ್ತಿರುವ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲಿ ದಾಸ್ತಾನು ನಿರ್ವಹಣೆಗೆ ವಿಶೇಷ ಆದ್ಯತೆ ನೀಡಲಾಗಿದೆ ಎಂದು ಅವರು ತಿಳಿಸಿದರು.

> "ರೈತರಿಗೆ ಆತಂಕ ಬೇಡ... ಜಿಲ್ಲೆಯಲ್ಲೇ ಸಾಕಷ್ಟು ಬೀಜ, ಯೂರಿಯಾ ದಾಸ್ತಾನು ಇದೆ"
> **– ಜಿಲ್ಲಾಧಿಕಾರಿ ಸ್ನೇಹಲ್ ಆರ್.**




**ಫ್ರೂಟ್ ಐಡಿ ಇಲ್ಲದೆ ಯೂರಿಯಾ ಇಲ್ಲ :** ರಾಜ್ಯ ಸರ್ಕಾರದ ಸೂಚನೆಯಂತೆ ಫ್ರೂಟ್ (ಈಖಿಗಿಖಖಿಖ) ಐಡಿ ಹೊಂದಿರುವ ರೈತರಿಗೆ ಮಾತ್ರ ಯೂರಿಯಾ ರಸಗೊಬ್ಬರ ವಿತರಿಸಲಾಗುತ್ತದೆ. ಕೆ-ಕಿಸಾನ್ ತಂತ್ರಾಂಶ ಹಾಗೂ ಪಿಒಎಸ್ ಯಂತ್ರಗಳ ಮೂಲಕ ಮಾರಾಟ ಕಡ್ಡಾಯಗೊಳಿಸಲಾಗಿದೆ. ರೈತರ ಭೂವಿಸ್ತೀರ್ಣದ ಆಧಾರದ ಮೇಲೆ ಪ್ರತಿ ಎಕರೆಗೆ ಒಂದು ಚೀಲದಂತೆ ಯೂರಿಯಾ ನೀಡಲು ಸೂಚಿಸಲಾಗಿದೆ.

**"ಹೆಚ್ಚು ದರ ವಸೂಲಿ ಮಾಡಿದರೆ ಕಠಿಣ ಕ್ರಮ"** ರೈತರಿಗೆ ಲಿಂಕ್ ಗೊಬ್ಬರ ನೀಡುವುದು, ಎಂಆರ್‌ಪಿ ದರಕ್ಕಿಂತ ಹೆಚ್ಚು ಹಣ ವಸೂಲಿ ಮಾಡುವುದು, ರಶೀದಿ ನೀಡದಿರುವುದು ಹಾಗೂ ದಾಸ್ತಾನು ವಿವರ ಪ್ರದರ್ಶಿಸದಿರುವುದು ಗಂಭೀರ ಉಲ್ಲಂಘನೆ ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್. ಎಚ್ಚರಿಸಿದರು.

ನಿಯಮ ಉಲ್ಲಂಘಿಸಿದ ಅಂಗಡಿಗಳ ಲೈಸನ್ಸ್ ಅಮಾನತು ಮಾಡಿ ರದ್ದುಪಡಿಸಲಾಗುವುದು ಎಂದು ಖಡಕ್ ಸಂದೇಶ ನೀಡಿದರು.

ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಧಾರವಾಡ ಜಿಲ್ಲೆಯಲ್ಲಿ ಒಟ್ಟು 2,82,677 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಗುರಿ ಹೊಂದಲಾಗಿದೆ. ಭತ್ತ, ಜೋಳ, ತೊಗರಿ, ಹೆಸರು, ಶೇಂಗಾ, ಸೋಯಾಬೀನ್, ಹತ್ತಿ, ಕಬ್ಬು ಸೇರಿದಂತೆ ವಿವಿಧ ಬೆಳೆಗಳನ್ನು ಬೆಳೆಯಲು ರೈತರು ಸಜ್ಜಾಗಿದ್ದಾರೆ.

ಜಿಲ್ಲೆಯಲ್ಲಿ 24 ಸಾವಿರ ಮೆಟ್ರಿಕ್ ಟನ್ ಗೊಬ್ಬರ ದಾಸ್ತಾನು

ಜಿಲ್ಲೆಯಲ್ಲಿ ಪ್ರಸ್ತುತ ಒಟ್ಟು 24,793.76 ಮೆಟ್ರಿಕ್ ಟನ್ ವಿವಿಧ

> "ಮುಂಗಾರು ಹಂಗಾಮಿಗೆ ಬೇಕಾದಷ್ಟು ಬೀಜ ಹಾಗೂ ರಸಗೊಬ್ಬರ ಜಿಲ್ಲೆಯಲ್ಲಿ ಲಭ್ಯವಿದೆ. ರೈತರು ಆತಂಕ ಪಡುವ ಅಗತ್ಯವಿಲ್ಲ. ನಕಲಿ ಬಿ ೀಜ, ಕಳಪೆ ಗೊಬ್ಬರ ಹಾಗೂ ಹೆಚ್ಚಿನ ದರ ವಸೂಲಿ ಮಾಡಿದವರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುತ್ತದೆ."
> **– ಜಿಲ್ಲಾಧಿಕಾರಿ ಸ್ನೇಹಲ್ ಆರ್.**

**539 ದಾಳಿ... 7 ಲೈಸನ್ಸ್ ರದ್ದು! :** ಕೃಷಿ ಇಲಾಖೆ ಹಾಗೂ ವಿಚಕ್ಷಣ ದಳಗಳು ಜಿಲ್ಲೆಯ ವಿವಿಧ ಗೊಬ್ಬರ ಮಾರಾಟ ಕೇಂದ್ರಗಳಿಗೆ ಈಗಾಗಲೇ 539 ಪರಿಶೀಲನಾ ಭೇಟಿಗಳನ್ನು ನಡೆಸಿವೆ.

126 ಕೇಂದ್ರಗಳಿಗೆ ನೋಟಿಸ್ 93 ಕೇಂದ್ರಗಳಿಗೆ ಕಾರಣ ಕೇಳಿ ನೋಟಿಸ್ 7 ಮಾರಾಟ ಕೇಂದ್ರಗಳ ಲೈಸನ್ಸ್ ರದ್ದು ಮಾಡಲಾಗಿದೆ.

14 ರೈತ ಸಂಪರ್ಕ ಕೇಂದ್ರಗಳು ಹಾಗೂ 17 ಹೆಚ್ಚುವರಿ ಕೇಂದ್ರಗಳ ಮೂಲಕ ರೈತರಿಗೆ ವಿವಿಧ ಬಿತ್ತನೆ ಬೀಜಗಳನ್ನು ವಿತರಿಸಲಾಗುತ್ತಿದೆ. ರೈತರು ಕಡ್ಡಾಯವಾಗಿ ತಮ್ಮ ಫ್ರೂಟ್ ಐಡಿ ನೀಡಿ ಬೀಜ ಖರೀದಿಸಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

**ಸಹಾಯವಾಣಿ ಬೀಜ-ಗೊಬ್ಬರ ಸಮಸ್ಯೆಗಳಿಗೆ ಸಂಪರ್ಕಿಸಿ**

ಧಾರವಾಡ : 8277931285
ಕಲಘಟಗಿ : 7259206660
ಹುಬ್ಬಳ್ಳಿ : 8277931288
ಕುಂದಗೋಳ : 9071449976
ನವಲಗುಂದ : 8277931295

---

ರಾಜ್ಯಮಟ್ಟದ ವಿಚಾರ ಸಂಕಿರಣದಲ್ಲಿ ಡಾ. ಶಾಂತಿನಾಥ ದಿಬ್ಬದ, ಡಾ. ರಾಜಶೇಖರ ಇಚ್ಚಂಗಿ, ಲಲಿತಕ್ಕ ಕೆರಿಮನಿ ಉಪನ್ಯಾಸ

# ತಿರುಳ್ ಕನ್ನಡದ ತವರೂರು ಪುಲಿಗೆರೆ!

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಾವಿರಾರು ವರ್ಷಗಳ ಇತಿಹಾಸ ಹೊಂದಿರುವ ಪುಲಿಗೆರೆ ನಾಡಿನ ತಿರುಳ್ ಕನ್ನಡ ಸಾಹಿತ್ಯ ಪರಂಪರೆ, ಪಂಪ-ಆಚಣ್ಣರ ಕಾವ್ಯ ವೈಭವ ಹಾಗೂ ಕನ್ನಡ ಭಾಷೆಯ ಶ್ರೀಮಂತಿಕೆಯನ್ನು ಅನಾವರಣಗೊಳಿಸಿದ ರಾಜ್ಯಮಟ್ಟದ ವಿಚಾರ ಸಂಕಿರಣ ಲಕ್ಷ್ಮೇಶ್ವರದಲ್ಲಿ ಸಾಹಿತ್ಯಾಸಕ್ತರ ಗಮನ ಸೆಳೆಯಿತು.

ಪುಲಿಗೆರೆ ಪರಿಸರದ ಪ್ರಾಚೀನ ಕನ್ನಡ ಸಾಹಿತ್ಯ ಕುರಿತ ರಾಜ್ಯಮಟ್ಟದ ವಿಚಾರ ಸಂಕಿರಣದ ಎರಡನೇ ದಿನ ಹಿರಿಯ ಸಾಹಿತಿಗಳು ಹಾಗೂ ವಿಶ್ರಾಂತ ಕನ್ನಡ ಪ್ರಾಧ್ಯಾಪಕರು ಉಪನ್ಯಾಸ ನೀಡಿ ಕನ್ನಡ ಸಾಹಿತ್ಯದ ಭವ್ಯ ಇತಿಹಾಸವನ್ನು ಮನಮುಟ್ಟುವಂತೆ ಅನಾವರಣಗೊಳಿಸಿದರು.

ವಿಚಾರ ಸಂಕಿರಣದ ಮೊದಲ ಉಪನ್ಯಾಸ ನೀಡಿದ ವಿಶ್ರಾಂತ ಕನ್ನಡ ಪ್ರಾಧ್ಯಾಪಕ ಡಾ. ಶಾಂತಿನಾಥ ದಿಬ್ಬದ, "ಸಾವಿರಾರು ವರ್ಷಗಳ ಭವ್ಯ ಇತಿಹಾಸ ಹೊಂದಿರುವ ಕನ್ನಡ ಭಾಷೆಯಲ್ಲಿ ಆದಿಕವಿ ಪಂಪನ ಹೆಸರು ಚಿರಸ್ಥಾಯಿಯಾಗಿ ಉಳಿದಿದೆ. ಸಾವಿರ ವರ್ಷವಾದರೂ ಸಾವು ಇರದ ಕವಿ ಎಂದರೆ ಅದು ಪಂಪ" ಎಂದು ಹೇಳಿದರು.








ಸಂಸ್ಕೃತ ಕವಿಯಾಗುವ ಎಲ್ಲ ಅವಕಾಶಗಳಿದ್ದರೂ ಪಂಪನು ಪುಲಿಗೆರೆ ನಾಡಿನ ಜನರ ಭಾಷೆಯಾದ ತಿರುಳ್ ಕನ್ನಡವನ್ನೇ ತನ್ನ ಮಹಾಕಾವ್ಯಗಳ ಭಾಷೆಯನ್ನಾಗಿ ಮಾಡಿಕೊಂಡಿದ್ದಾನೆ. ಅಂದಿನಿಂದ ಇಂದಿನವರೆಗೂ 'ಪುಲಿಗೆರೆ ಪಂಪ' ಎಂದೇ ಪ್ರಸಿದ್ಧಿಯಾಗಿರುವುದು ಕನ್ನಡಿಗರ ಹೆಮ್ಮೆ ಎಂದು ಹೇಳಿದರು.

ಪುಲಿಗೆರೆಯ ತಿರುಳ್ ಕನ್ನಡ ಪದಗಳು ಇಂದಿಗೂ ಪಂಪನ ಕಾವ್ಯಗಳಲ್ಲಿ ಸ್ಪಷ್ಟವಾಗಿ ಕಾಣುತ್ತವೆ ಎಂದು ವಿವರಿಸಿದರು.

ಮುಂದಿನ ಉಪನ್ಯಾಸದಲ್ಲಿ ವಿಶ್ರಾಂತ ಕನ್ನಡ ಪ್ರಾಧ್ಯಾಪಕ ಡಾ. ರಾಜಶೇಖರ ಇಚ್ಚಂಗಿ ಮಾತನಾಡಿ, "ಆಚಣ್ಣ ಕವಿಯ ಜನ್ಮಸ್ಥಳ ಪುಲಿಗೆರೆ, ಇಂದಿನ ಲಕ್ಷ್ಮೇಶ್ವರ. ಜೈನ ಧರ್ಮದ ಶ್ರೇಷ್ಠ ಕವಿಯಾಗಿದ್ದ ಆಚಣ್ಣ, ಪುಲಿಗೆರೆಯ ಸಾಹಿತ್ಯ ಪರಂಪರೆಯನ್ನು ಎತ್ತಿಹಿಡಿದ ಪ್ರಮುಖ ಕವಿಗಳಲ್ಲಿ ಒಬ್ಬ" ಎಂದು ಹೇಳಿದರು.

> "ಸಾವಿರ ವರ್ಷವಾದರೂ ಸಾವು ಇರದ ಕವಿ ಎಂದರೆ ಅದು ಪಂಪ. ಪುಲಿಗೆರೆಯ ತಿರುಳ್ ಕನ್ನಡವನ್ನೇ ತನ್ನ ಮಹಾಕಾವ್ಯಗಳ ಭಾಷೆಯನ್ನಾಗಿ ಮಾಡಿಕೊಂಡಿರುವುದು ಕನ್ನಡ ಸಾಹಿತ್ಯದ ಹೆಮ್ಮೆ."
> **– ಡಾ. ಶಾಂತಿನಾಥ ದಿಬ್ಬದ,** ವಿಶ್ರಾಂತ ಕನ್ನಡ ಪ್ರಾಧ್ಯಾಪಕ

ಪುಲಿಗೆರೆ ಮತ್ತು ಬೆಳ್ವೊಳ ಪ್ರದೇಶದಲ್ಲಿ ಬಳಕೆಯಲ್ಲಿದ್ದ 'ತಿರುಳ್ ಕನ್ನಡ'ವನ್ನು ತನ್ನ ಕಾವ್ಯಗಳಲ್ಲಿ ಬಳಸಿರುವುದಾಗಿ ಆಚಣ್ಣ ಹೆಮ್ಮೆಯಿಂದ ಉಲ್ಲೇಖಿಸಿದ್ದಾನೆ. ಆಚಣ್ಣನ 'ವರ್ಧಮಾನ ಪುರಾಣ' ಕನ್ನಡ ಸಾಹಿತ್ಯದ ಶ್ರೇಷ್ಠ ಚಂಪೂ ಕಾವ್ಯಗಳಲ್ಲಿ ಒಂದಾಗಿದ್ದು, ಜೈನ ಧರ್ಮದ 24ನೇ ತೀರ್ಥಂಕರ ಶ್ರೀ ವರ್ಧಮಾನ ಮಹಾವೀರ ಸ್ವಾಮಿಯವರ ಪಾವನ ಜೀವನ ಚರಿತ್ರೆಯನ್ನು ಒಳಗೊಂಡ ಮಹತ್ವದ ಕೃತಿ ಎಂದು ಹೇಳಿದರು.

ರಾಜ್ಯ ಪ್ರಶಸ್ತಿ ಪುರಸ್ಕೃತ ಹಿರಿಯ ಸಾಹಿತಿ ಲಲಿತಕ್ಕ ಕೆರಿಮನಿ ಮಾತನಾಡಿ, "ಪುಲಿಗೆರೆ, ಇಂದಿನ ಲಕ್ಷ್ಮೇಶ್ವರ, ಸಾವಿರಾರು ವರ್ಷಗಳಿಂದ ಕನ್ನಡ ಸಾಹಿತ್ಯದ ಪ್ರಮುಖ ಕೇಂದ್ರವಾಗಿದೆ. ಅನೇಕ ಮಹಾನ್ ಕವಿಗಳು ಹಾಗೂ ಸಾಹಿತಿಗಳು ಪುಲಿಗೆರೆಯ ವೈಭವವನ್ನು ಸಾಹಿತ್ಯದಲ್ಲಿ ದಾಖಲಿಸಿದ್ದಾರೆ" ಎಂದು ಹೇಳಿದರು.

ಪುಲಿಗೆರೆ ಸೋಮನಾಥ ರಚಿಸಿದ 'ಸೋಮೇಶ್ವರ ಶತಕ' ಲೋಕನೀತಿ, ಸಜ್ಜನಿಕೆ ಹಾಗೂ ರಾಜನೀತಿಯನ್ನು ಬೋಧಿಸುವ ಅತ್ಯಂತ ಜನಪ್ರಿಯ ಶತಕ ಕಾವ್ಯವಾಗಿದೆ. 'ಪುಲಿಗೆರೆ 300' ಕೃತಿಯಲ್ಲಿ ಬಾದಾಮಿ ಚಾಲುಕ್ಯರ ಕಾಲದಲ್ಲಿ ಈ ಪ್ರದೇಶವು 300 ಹಳ್ಳಿಗಳನ್ನೊಳಗೊಂಡ ದೊಡ್ಡ ಸಾಂಸ್ಕೃತಿಕ ಹಾಗೂ ಸಾಹಿತ್ಯ ಕೇಂದ್ರವಾಗಿತ್ತು ಎಂದು ಉಲ್ಲೇಖಿಸಲಾಗಿದೆ ಎಂದು ವಿವರಿಸಿದರು.

ಕನ್ನಡ ಸಾಹಿತ್ಯದಲ್ಲಿ ಪುಲಿಗೆರೆಯ ಕನ್ನಡವನ್ನು "ಅತ್ಯಂತ ಪರಿಶುದ್ಧ ಮತ್ತು ಮಧುರವಾದ ತಿರುಳ್ ಕನ್ನಡ" ಎಂದು ಕರೆಯಲಾಗಿದೆ

---

ಗಂಗಾಮತ ಸಮಾಜದ ಎಸ್‌ಎಸ್‌ಎಲ್‌ಸಿ ಪಿಯುಸಿ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಗೌರವ

# ನಾಳೆ ಬಾಗಲಕೋಟೆಯಲ್ಲಿ ಪ್ರತಿಭಾ ಪುರಸ್ಕಾರ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಗಂಗಾಮತ ನೌಕರರ ಕ್ಷೇಮಾಭಿವೃದ್ಧಿ ಸಂಘ, ಬೆಂಗಳೂರು ಹಾಗೂ ಬಾಗಲಕೋಟೆ ಗಂಗಾಮತ ನೌಕರರ ಸಂಘದ ಸಹಯೋಗದಲ್ಲಿ ಗಂಗಾಮತ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ರಾಜ್ಯಮಟ್ಟದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಮೇ 24ರಂದು ಬಾಗಲಕೋಟೆಯಲ್ಲಿ ಹಮ್ಮಿಕೊಳ್ಳಲಾಗಿದೆ.

ಬಾಗಲಕೋಟೆ ನಗರದ ನವನಗರದ ಕಲಾಭವನದಲ್ಲಿ ಭಾನುವಾರ ಬೆಳಿಗ್ಗೆ 10 ಗಂಟೆಗೆ ಕಾರ್ಯಕ್ರಮ ನಡೆಯಲಿದ್ದು, ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಗಳಲ್ಲಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿ-ವಿದ್ಯಾರ್ಥಿನಿಯರನ್ನು ಸನ್ಮಾನಿಸಲಾಗುತ್ತದೆ.

ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ನಿಜಶರಣ ಅಂಬಿಗರ ಚೌಡಯ್ಯನವರ ಗುರುಪೀಠ, ಸುಕ್ಷೇತ್ರ ನರಸೀಪುರದ ಪೀಠಾಧ್ಯಕ್ಷರಾದ ಪೂಜ್ಯ ಜಗದ್ಗುರು ಶ್ರೀ ಶ್ರೀ ಶ್ರೀ ಶಾಂತಭೀಷ್ಮ ಚೌಡಯ್ಯ



ಮಹಾಸ್ವಾಮಿಗಳು ವಹಿಸಲಿದ್ದಾರೆ.

ಅಬಕಾರಿ ಸಚಿವರು ಹಾಗೂ ಬಾಗಲಕೋಟೆ ಜಿಲ್ಲಾ ಉಸ್ತುವಾರಿ ಸಚಿವರಾದ ಆರ್. ಬಿ. ತಿಮ್ಮಾಪೂರ ಮತ್ತು ಮೀನುಗಾರಿಕೆ, ಬಂದರು ಹಾಗೂ ಒಳನಾಡು ಜಲಸಾರಿಗೆ ಸಚಿವರಾದ ಮಂಕಾಳ ಎಸ್. ವೈದ್ಯ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

ಕರ್ನಾಟಕ ರಾಜ್ಯ ಗಂಗಾಮತಸ್ಥ ನೌಕರರ ರಾಜ್ಯ ಸಂಘದ ಪ್ರಧಾನ ಕಾರ್ಯದರ್ಶಿ ಹಾಗೂ ಬಾಗಲಕೋಟೆ ಜಿಲ್ಲಾ ಅಧ್ಯಕ್ಷ ಉದಯಕುಮಾರ ಅಂಬಿಗೇರ ಅಧ್ಯಕ್ಷತೆ ವಹಿಸಲಿದ್ದಾರೆ.

ಈ ಸಂದರ್ಭದಲ್ಲಿ ಅಂಬಿಗರ ಚೌಡಯ್ಯನವರ ಭಾವಚಿತ್ರದ ಮೆರವಣಿಗೆ ವಿವಿಧ ಕಲಾತಂಡಗಳೊಂದಿಗೆ ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಲಿದೆ.

ಗದಗ ಜಿಲ್ಲೆಯ ಗಂಗಾಮತ ಸಮಾಜದ ಬಾಂಧವರು, ನೌಕರರು ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಕರ್ನಾಟಕ ರಾಜ್ಯ ಗಂಗಾಮತಸ್ಥ ನೌಕರರ ಕ್ಷೇಮಾಭಿವೃದ್ಧಿ ಸಂಘದ ರಾಜ್ಯ ನಿರ್ದೇಶಕರು ಹಾಗೂ ಗದಗ ಜಿಲ್ಲಾ ಅಂಬಿಗರ ಸಮಾಜದ ಪ್ರಧಾನ ಕಾರ್ಯದರ್ಶಿ ಸಂಗಮೇಶ ಹಾದಿಮನಿ ಪತ್ರಿಕಾ ಪ್ರಕಟಣೆಯಲ್ಲಿ ಕೋರಿದ್ದಾರೆ.

> "ಶಿಕ್ಷಣದ ಮೂಲಕ ಸಮಾಜದ ಮಕ್ಕಳಿಗೆ ಉತ್ತಮ ಭವಿಷ್ಯ ರೂಪಿಸುವ ಉದ್ದೇಶದಿಂದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ."
> **– ಸಂಗಮೇಶ ಹಾದಿಮನಿ,** ರಾಜ್ಯ ನಿರ್ದೇಶಕರು

---

ಎಸ್ಸಿ-ಎಸ್ಟಿ ಸಮುದಾಯದವರು ನರೇಗಾ ಯೋಜನೆ ಸದುಪಯೋಗ ಪಡೆದುಕೊಳ್ಳಿ: ಪಿಡಿಓ ಮಂಜುನಾಥ ಗಣಿ ಕರೆ

# "ವಲಸೆ ಬೇಡ... ಊರಲ್ಲೇ ಕೆಲಸ ಮಾಡಿ"

■ ವಿಜಯಸಾಕ್ಷಿ ಸುದ್ದಿ, ನರಗುಂದ

ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಸಮುದಾಯದ ಕಾರ್ಮಿಕರು ಹೆಚ್ಚಿನ ಸಂಖ್ಯೆಯಲ್ಲಿ ನರೇಗಾ ಯೋಜನೆಯಲ್ಲಿ ಭಾಗವಹಿಸಿ, ಸರ್ಕಾರ ನೀಡುತ್ತಿರುವ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಬನಹಟ್ಟಿ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಮಂಜುನಾಥ ಗಣಿ ಕರೆ ನೀಡಿದರು.

ಬನಹಟ್ಟಿ ಗ್ರಾಮ ಪಂಚಾಯತ್ ವ್ಯಾಪ್ತಿಯ ಬನಹಟ್ಟಿ ಗ್ರಾಮದಲ್ಲಿ ನರೇಗಾ ಯೋಜನೆಯಡಿ ನಡೆಯುತ್ತಿರುವ ಸಮುದಾಯ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಕಾರ್ಮಿಕರನ್ನು ಉದ್ದೇಶಿಸಿ ಅವರು ಮಾತನಾಡಿದರು.

ಬೇಸಿಗೆ ಅವಧಿಯಲ್ಲಿ ರೈತರ ಹೊಲಗಳಲ್ಲಿ ಬದು ನಿರ್ಮಾಣ ಕಾಮಗಾರಿ ಕೈಗೊಳ್ಳಲಾಗುತ್ತಿದ್ದು, ಎಸ್ಸಿ-ಎಸ್ಟಿ ಸಮುದಾಯದ ರೈತರು ಮತ್ತು ಕಾರ್ಮಿಕರು ತಮ್ಮ ಹೊಲಗಳಿಗೂ ಬದು ನಿರ್ಮಿಸಿಕೊಳ್ಳಲು ಮುಂದಾಗಬೇಕು ಎಂದು ಹೇಳಿದರು.



> "ಮಳೆ ಇಲ್ಲದೆ ಕೆಲಸ ಸಿಗುತ್ತಿಲ್ಲ ಎಂದು ಚಿಂತಿಸಬೇಡಿ. ಮಳೆ ಆರಂಭವಾಗುವವರೆಗೂ ನರೇಗಾ ಯೋಜನೆಯಡಿ ಕೆಲಸ ನೀಡಲು ಗ್ರಾಮ ಪಂಚಾಯತ್ ಸಿದ್ಧವಿದೆ."
> **– ಮಂಜುನಾಥ ಗಣಿ,** ಪಿಡಿಓ, ಬನಹಟ್ಟಿ ಗ್ರಾಮ ಪಂಚಾಯತ್

ಮಳೆ ಇಲ್ಲದೆ ಕೂಲಿ ಕೆಲಸ ಸಿಗುತ್ತಿಲ್ಲ ಎಂದು ಆತಂಕಪಡುವ ಅಗತ್ಯವಿಲ್ಲ. ಮಳೆ ಆರಂಭವಾಗುವವರೆಗೂ ನರೇಗಾ ಯೋಜನೆಯಡಿ ಕೆಲಸ ನೀಡಲು ಗ್ರಾಮ ಪಂಚಾಯತ್ ಸಿದ್ಧವಿದ್ದು, ಬನಹಟ್ಟಿ ಗ್ರಾಮ ಪಂಚಾಯತ್ ವ್ಯಾಪ್ತಿಯ ಎಲ್ಲ ಗ್ರಾಮಗಳ ಕಾರ್ಮಿಕರು ಇದರ ಪ್ರಯೋಜನ ಪಡೆಯಬೇಕು ಎಂದು ಮನವಿ ಮಾಡಿದರು.

ನರೇಗಾ ಜಾಬ್ ಕಾರ್ಡ್‌ನ್ನು ಗ್ರಾಮ ಪಂಚಾಯತ್ ವತಿಯಿಂದ ಉಚಿತವಾಗಿ ನೀಡಲಾಗುತ್ತದೆ. ಕೆಲಸಕ್ಕೆ ಹಾಜರಾಗಲು ಉದ್ಯೋಗ ಚೀಟಿಯೊಂದಿಗೆ ಇ-ಕೈವೈಸಿ ಕಡ್ಡಾಯವಾಗಿ ಮಾಡಿಸಿರಬೇಕು ಎಂದು ತಿಳಿಸಿದರು.

ನರೇಗಾ ಯೋಜನೆಯಡಿ ಗಂಡು-ಹೆಣ್ಣು ಭೇದವಿಲ್ಲದೆ ದಿನಕ್ಕೆ ₹370 ಸಮಾನ ಕೂಲಿ ನೀಡಲಾಗುತ್ತಿದೆ. ಬೇಸಿಗೆ ಕಾರಣ ವಲಸೆ ಹೋಗದೇ, ತಮ್ಮ ಊರಲ್ಲೇ ಕೆಲಸ ಪಡೆದು ಆರೋಗ್ಯಕರ ಜೀವನ ನಡೆಸುವಂತೆ ಸಲಹೆ ನೀಡಿದರು.

ಪಿಡಿಓ ಮಂಜುನಾಥ ಗಣಿ ನೇತೃತ್ವದಲ್ಲಿ ನರೇಗಾ ಐಇಸಿ ಚಟುವಟಿಕೆಗಳ ಮೂಲಕ ಬನಹಟ್ಟಿ ಗ್ರಾಮದ ಎಸ್ಸಿ-ಎಸ್ಟಿ ಕಾಲೋನಿಗಳಲ್ಲಿ ವಿಶೇಷ ಜಾಗೃತಿ ಅಭಿಯಾನ ಕೈಗೊಳ್ಳಲಾಗಿತ್ತು. ಇದರ ಪರಿಣಾಮವಾಗಿ 60ಕ್ಕೂ ಹೆಚ್ಚು ಎಸ್ಸಿ-ಎಸ್ಟಿ ಸಮುದಾಯದ ಕಾರ್ಮಿಕರು ಶುಕ್ರವಾರ ನರೇಗಾ ಕೆಲಸಕ್ಕೆ ಹಾಜರಾಗಿದ್ದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ್ ಕಾರ್ಯದರ್ಶಿ ಮಾಳಪ್ಪ ಪೂಜಾರ, ಸಿಬ್ಬಂದಿ ಶಿವನಪ್ಪ ಕಲ್ಲಾಪೂರ, ನರೇಗಾ ಸಿಬ್ಬಂದಿಗಳಾದ ಸುನೀಲ ಶಿರೋಳ, ಮಂಜುನಾಥ ನಾಡಗೌಡ ಹಾಗೂ ಕಾಯಕಬಂಧು ತಳವಾರ ಉಪಸ್ಥಿತರಿದ್ದರು.

---

"ಸಹಬಾಳ್ವೆಯ ಪರಂಪರೆ ಉಳಿಸೋಣ" : ಸಿಪಿಐ ಬಿ.ವೈ. ನ್ಯಾಮಗೌಡ

# ಶಾಂತಿ-ಸೌಹಾರ್ದದಿಂದ ಬಕ್ರೀದ್ ಆಚರಿಸಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಯಾವುದೇ ಸಮುದಾಯವಾಗಿರಲಿ, ಹಬ್ಬದ ಆಚರಣೆ ವೇಳೆ ಅನ್ಯ ಧರ್ಮದ ಬಗ್ಗೆ ತಾತ್ಸಾರ ಮಾಡದೆ ಶಾಂತಿಯುತವಾಗಿ ನಡೆದುಕೊಂಡಾಗ ಮಾತ್ರ ಸಮಾಜದಲ್ಲಿ ಸೌಹಾರ್ದತೆ ಉಳಿಯಲು ಸಾಧ್ಯವಾಗುತ್ತದೆ ಎಂದು ಸಿಪಿಐ ಬಿ.ವೈ. ನ್ಯಾಮಗೌಡ ಹೇಳಿದರು.

ಪಟ್ಟಣದ ಪೊಲೀಸ್ ಠಾಣೆಯಲ್ಲಿ ಬಕ್ರೀದ್ ಹಬ್ಬದ ಪ್ರಯುಕ್ತ ಆಯೋಜಿಸಿದ್ದ ಶಾಂತಿ ಸಭೆಯಲ್ಲಿ ಅವರು ಮಾತನಾಡಿದರು.

ಲಕ್ಷ್ಮೇಶ್ವರ ಪಟ್ಟಣವು ಸದಾ ಎಲ್ಲ ಧರ್ಮದವರ ಸಹಬಾಳ್ವೆ ಮತ್ತು ಸೌಹಾರ್ದತೆಯ ನಾಡಾಗಿದೆ. ಅದೇ ಪರಂಪರೆ ಮುಂದುವರಿಯಬೇಕು. ಪ್ರತಿಯೊಬ್ಬರೂ ಕಾನೂನಿಗೆ ಬದ್ಧರಾಗಿ ನಡೆದುಕೊಂಡು ಹಬ್ಬಗಳನ್ನು ಶಾಂತಿಯುತವಾಗಿ ಆಚರಿಸಬೇಕು ಎಂದು ಮನವಿ ಮಾಡಿದರು.




> "ಹಬ್ಬಗಳ ಆಚರಣೆ ವೇಳೆ ಶಾಂತಿ ಮತ್ತು ಸೌಹಾರ್ದತೆ ಕಾಪಾಡಿದಾಗ ಮಾತ್ರ ಸಮಾಜದಲ್ಲಿ ಒಗ್ಗಟ್ಟು ಉಳಿಯುತ್ತದೆ."
> **– ಬಿ.ವೈ. ನ್ಯಾಮಗೌಡ, ಸಿಪಿಐ**

ಹಿರಿಯ ಮುಖಂಡರಾದ ಪೂರ್ಣಾಜಿ ಖರಾಟೆ ಹಾಗೂ ಸಿ.ಆರ್. ಗೋಕಾವಿ ಮಾತನಾಡಿ, "ಬಕ್ರೀದ್ ತ್ಯಾಗ ಮತ್ತು ಬಲಿದಾನದ ಸಂಕೇತವಾಗಿರುವ ಹಬ್ಬವಾಗಿದೆ. ಎಲ್ಲ ಧರ್ಮಗಳೂ ಒಳ್ಳೆಯ ಮೌಲ್ಯಗಳನ್ನೇ ಬೋಧಿಸಿವೆ. ಪ್ರತಿವರ್ಷದಂತೆ ಈ ಸಲವೂ ಎಲ್ಲ ಸಮಾಜದವರು ಪರಸ್ಪರ ಸಹೋದರತ್ವದಿಂದ ಹಬ್ಬ ಆಚರಿಸಲಿದ್ದಾರೆ" ಎಂದು ಹೇಳಿದರು.

ರಫೀಕ್ ಕಲಬುರ್ಗಿ, ಡಿ.ಬಿ. ... ನಾಗರಾಜ ಗಡದ, ಕ್ರೈಂ ವಿಭಾಗದ ಪಿಎಸ್‌ಐ ಟಿ.ಕೆ. ರಾಥೋಡ, ದೂದನಾನಾ ದರ್ಗಾ ಕಮಿಟಿ ಅಧ್ಯಕ್ಷ ಸುಲೇಮಾನ್ ಕಣಕೆ, ಹುಸೇನಸಾಬ ಗೂಡೂರ, ಅಬ್ದುಲ್‌ಸಾಬ್ ಬೆಟಗೇರಿ, ಇಸ್ಮಾಯಿಲ್ ಆಡೂರ, ಸುರೇಶ ಹಟ್ಟಿ, ಅನಂತ ತೇಲಂಗ, ಎನ್.ಎಂ. ಬಾಡಗಿ, ದಾದಾಪೀರ ಕಾರಡಗಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

**ಶಾಂತಿ ಸಭೆಯ ಪ್ರಮುಖ ಸಂದೇಶಗಳು**

- ಬಕ್ರೀದ್ ಹಬ್ಬವನ್ನು ಶಾಂತಿಯುತವಾಗಿ ಆಚರಿಸಿ
- ಅನ್ಯ ಧರ್ಮಗಳ ಬಗ್ಗೆ ಗೌರವ ಇರಲಿ
- ಕಾನೂನು ಉಲ್ಲಂಘನೆ ಮಾಡಬೇಡಿ
- ಸಹೋದರತ್ವ ಮತ್ತು ಸಹಬಾಳ್ವೆ ಉಳಿಸೋಣ
- ಹಬ್ಬಗಳು ಸೌಹಾರ್ದತೆಯ ಸಂಕೇತವಾಗಲಿ

### ಮೂಲಭೂತ ಸೌಲಭ್ಯಕ್ಕಾಗಿ ಪುರಸಭೆಗೆ ದೌಡಾಯಿಸಿದ ಗಡ್ಡದೇವರಮಠ ಆಶ್ರಯ ಬಡಾವಣೆಯ ಜನ

# 20 ದಿನಕ್ಕೊಮ್ಮೆ ನೀರು... ಕೆಸರಿನಲ್ಲಿ ಬದುಕು!

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

"ನದಿ ನೀರಿನ ಪೈಪ್ ನಮ್ಮ ಬಡಾವಣೆಯಲ್ಲೇ ಹಾದು ಹೋಗುತ್ತದೆ... ಆದರೆ 20 ದಿನಕ್ಕೊಮ್ಮೆ ಮಾತ್ರ ನೀರು ಬರುತ್ತದೆ.

ಮಳೆ ಬಂದರೆ ರಸ್ತೆ ಕೆರೆಯಾಗುತ್ತದೆ. ಮನೆ ಮುಂದೆ ಚರಂಡಿ ನೀರು ಹರಿಯುತ್ತದೆ..." ಇಂತಹ ಗಂಭೀರ ಸಮಸ್ಯೆಗಳ ವಿರುದ್ಧ ಆಕ್ರೋಶಗೊಂಡ ಗಡ್ಡದೇವರಮಠ ಆಶ್ರಯ ಬಡಾವಣೆಯ ನಿವಾಸಿಗಳು ಬುಧವಾರ ಪುರಸಭೆಗೆ ದಿಡೀರ್ ದೌಡಾಯಿಸಿ ಅಸಮಾಧಾನ ಹೊರಹಾಕಿದರು.

ಪಟ್ಟಣದ ಗಡ್ಡದೇವರಮಠ ಆಶ್ರಯ ಬಡಾವಣೆಯಲ್ಲಿ ಕುಡಿಯುವ ನೀರು, ರಸ್ತೆ, ಚರಂಡಿ ಹಾಗೂ ಸ್ವಚ್ಛತೆ ಸೇರಿದಂತೆ ಮೂಲಭೂತ ಸೌಲಭ್ಯಗಳ ಕೊರತೆಯಿಂದ ಸಾರ್ವಜನಿಕರು ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಆರೋಪಿಸಿದರು.

ಈ ವೇಳೆ ಮಾತನಾಡಿದ ನಿವಾಸಿಗಳು, "ನದಿ ನೀರು ಪೂರೈಕೆಯ ಪೈಪ್‌ಲೈನ್ ನಮ್ಮ ಭಾಗದಲ್ಲಿಯೇ ಹಾದು ಹೋಗಿದ್ದರೂ 20 ದಿನಗಳಿಗೊಮ್ಮೆ ಮಾತ್ರ ನೀರು ಪೂರೈಕೆಯಾಗುತ್ತಿದೆ.

ಇರುವ ಬೋರ್‌ವೆಲ್‌ನಿಂದಲೂ ಸಮರ್ಪಕ ನೀರು ಸಿಗುತ್ತಿಲ್ಲ. ನೀರಿಗಾಗಿ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ" ಎಂದು ಅಸಮಾಧಾನ ವ್ಯಕ್ತಪಡಿಸಿದರು.



> "20 ದಿನಕ್ಕೊಮ್ಮೆ ನೀರು ಬರುತ್ತಿದೆ. ಮಳೆ ಬಂದರೆ ರಸ್ತೆ ಕೆರೆಯಾಗುತ್ತದೆ. ಮೂಲಭೂತ ಸೌಲಭ್ಯಕ್ಕಾಗಿ ಪುರಸಭೆಗೆ ಬರಬೇಕಾದ ಸ್ಥಿತಿ ಬಂದಿದೆ."
> **–ಗಡ್ಡದೇವರಮಠ ಆಶ್ರಯ ಬಡಾವಣೆಯ ನಿವಾಸಿಗಳು**

ಮಳೆ ಬಂದಾಗ ಬಡಾವಣೆಯಿಂದ ಪಟ್ಟಣಕ್ಕೆ ಸಂಪರ್ಕಿಸುವ ರಸ್ತೆಯಲ್ಲಿ ಎದೆಯತ್ತರ ನೀರು ನಿಂತು ಸಂಚಾರಕ್ಕೆ ಅಡ್ಡಿಯಾಗುತ್ತಿದೆ.

ರಸ್ತೆಗಳು ಕೆಸರುಮಯವಾಗುತ್ತಿದ್ದು, ಸಮರ್ಪಕ ಚರಂಡಿ ವ್ಯವಸ್ಥೆ ಇಲ್ಲದ ಕಾರಣ ಮನೆಗಳ ಮುಂದೆ ನೀರು ಹರಿದು ಸಾರ್ವಜನಿಕರಿಗೆ ತೀವ್ರ ತೊಂದರೆ ಉಂಟಾಗುತ್ತಿದೆ ಎಂದು ದೂರಿದರು.

ತಕ್ಷಣವೇ ರಸ್ತೆ ದುರಸ್ತಿ, ಸಮರ್ಪಕ ಕುಡಿಯುವ ನೀರಿನ ವ್ಯವಸ್ಥೆ ಹಾಗೂ ಸ್ವಚ್ಛತಾ ಕಾಮಗಾರಿಗಳಿಗೆ ಆದ್ಯತೆ ನೀಡಬೇಕು.

ಸಮಸ್ಯೆಗಳನ್ನು ನಿರ್ಲಕ್ಷಿಸಿದರೆ ಮುಂದಿನ ದಿನಗಳಲ್ಲಿ ಹೋರಾಟ ನಡೆಸುವುದಾಗಿ ಸ್ಥಳೀಯರು ಎಚ್ಚರಿಕೆ ನೀಡಿದರು.

ನಿವಾಸಿಗಳ ಅಹವಾಲು ಆಲಿಸಿದ ಪುರಸಭೆ ಅಧಿಕಾರಿಗಳು ಹಾಗೂ ನೀರು ಸರಬರಾಜು ಇಲಾಖೆ ಮೇಲ್ವಿಚಾರಕ ಪರಶುರಾಮ ಮುಳಗುಂದ, ಸಮಸ್ಯೆ ಬಗೆಹರಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಈ ವೇಳೆ ವಿರೂಪಾಕ್ಷಪ್ಪ ಹಡಪದ, ಮಂಜುನಾಥ ಬಳಗಾನೂರ, ಭಾಷಾಸಾಬ ಬೂದಿಹಾಳ, ಕಿರಣ ಬಳಗಾನೂರ, ಎಚ್.ಎ. ಬಹದ್ದೂರ, ವೈ.ಎಂ. ನಾಲಬಂದ, ಚನ್ನವ್ವ ಕಮತದ, ನಿರ್ಮಲ ಹೊಸಮನಿ, ದಾವಲಬಿ ಬಾಗಲಕೋಟ, ಸಾಹೇರಾ ಗುಡಗೇರಿ, ಮಲ್ಲವ್ವ ಗಡದವರ, ಜೈತುನಬಿ ದೊಡ್ಡಮನಿ, ನೀಲವ್ವ ಮಾವನೂರ, ವಿನೋದಾ ಬೋರೆ, ನಿಂಗವ್ವ ಟಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ವಸತಿ-ನಿವೇಶನರಹಿತರಿಗೆ ಮತ್ತೊಂದು ಅವಕಾಶ

■ವಿಜಯಸಾಕ್ಷಿ ಸುದ್ದಿ, ರೋಣ

2018ರ ವಸತಿ ರಹಿತ ಹಾಗೂ ನಿವೇಶನ ರಹಿತ ಸಮೀಕ್ಷೆಯಲ್ಲಿ ವಿವಿಧ ಕಾರಣಗಳಿಂದ ಕೈಬಿಟ್ಟು ಹೋದ ಅರ್ಹ ಫಲಾನುಭವಿಗಳ ಮಾಹಿತಿಯನ್ನು ಆಯಾ ಗ್ರಾಮ ಪಂಚಾಯತ್ ಲಾಗಿನ್‌ನಲ್ಲಿ ನಮೂದಿಸಲು ಸರ್ಕಾರ ಅವಕಾಶ ಕಲ್ಪಿಸಿದೆ ಎಂದು ರೋಣ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ (ಇಒ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ರೋಣ ತಾಲೂಕಿನ ಅರ್ಹ ಸಾರ್ವಜನಿಕರು ಈ ಅವಕಾಶದ ಸದುಪಯೋಗ ಪಡೆದುಕೊಳ್ಳಬೇಕಿದ್ದು, ಅರ್ಜಿ ಸಲ್ಲಿಸಲು ಮೇ 31 ಕೊನೆಯ ದಿನವಾಗಿದೆ ಎಂದು ತಿಳಿಸಲಾಗಿದೆ. ವಸತಿ ಹಾಗೂ ನಿವೇಶನಕ್ಕಾಗಿ ಅರ್ಜಿ ಸಲ್ಲಿಸಲು ಬಯಸುವ ಅರ್ಹ ಅಭ್ಯರ್ಥಿಗಳು ಅಗತ್ಯ ದಾಖಲಾತಿಗಳೊಂದಿಗೆ ಸಂಬಂಧಿಸಿದ ಗ್ರಾಮ ಪಂಚಾಯತಿಗೆ ಭೇಟಿ ನೀಡಿ ಅರ್ಜಿ ಸಲ್ಲಿಸಬೇಕು ಎಂದು ಸೂಚಿಸಲಾಗಿದೆ. ಅರ್ಜಿ ಸಲ್ಲಿಸಲು ಆಧಾರ್ ಕಾರ್ಡ್, ರೇಷನ್ ಕಾರ್ಡ್, ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಮತದಾರರ ಗುರುತಿನ ಚೀಟಿ, ಇತ್ತೀಚಿನ ಭಾವಚಿತ್ರ ಹಾಗೂ ಬ್ಯಾಂಕ್ ಪಾಸ್‌ಬುಕ್ ಜೆರಾಕ್ಸ್ ಕಡ್ಡಾಯವಾಗಿ ಸಲ್ಲಿಸಬೇಕಾಗಿದೆ. ಅರ್ಹ ಫಲಾನುಭವಿಗಳು ಸರ್ಕಾರದ ಈ ವಿಶೇಷ ಅವಕಾಶವನ್ನು ತಪ್ಪಿಸಿಕೊಳ್ಳದೇ ಪ್ರಯೋಜನ ಪಡೆಯುವಂತೆ ತಾಲೂಕು ಪಂಚಾಯತ್ ಆಡಳಿತ ಮನವಿ ಮಾಡಿದೆ.

## ಪೂರ್ವಭಾವಿ ಸಭೆ ಇಂದು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಇದೇ ತಿಂಗಳ ಮೇ 31ರಂದು ಗದಗ ನಗರದಲ್ಲಿ ನಡೆಯಲಿರುವ ಸರ್ವ ಹಿಂದೂ ಸಮಾಜಗಳ ಸಭೆಯ ಹಿನ್ನೆಲೆಯಲ್ಲಿ ಪಟ್ಟಣದಲ್ಲಿ ಮೇ 23ರಂದು ಶನಿವಾರ ಪೂರ್ವಭಾವಿ ಸಭೆ ಆಯೋಜಿಸಲಾಗಿದೆ. ಪಟ್ಟಣದ ಶ್ರೀ ರಂಭಾಪುರಿ ಕಲ್ಯಾಣ ಮಂಟಪದಲ್ಲಿ ಸಂಜೆ 6 ಗಂಟೆಗೆ ಸಭೆ ನಡೆಯಲಿದ್ದು, ಕನ್ನೇರಿ ಮಠದ ಪೂಜ್ಯ ಶ್ರೀ ಅದೃಷ್ಟ ಕಾಡಸಿದ್ಧೇಶ್ವರ ಮಹಾಸ್ವಾಮಿಗಳ ನೇತೃತ್ವದಲ್ಲಿ ಗದಗದಲ್ಲಿ ನಡೆಯುವ ಕಾರ್ಯಕ್ರಮದ ಸಿದ್ಧತೆ ಕುರಿತು ಚರ್ಚೆ ನಡೆಯಲಿದೆ ಎಂದು ಸಂಘಟಕರು ತಿಳಿಸಿದ್ದಾರೆ. ಈ ಭಾಗದ ವಿವಿಧ ಹಿಂದೂ ಸಮಾಜಗಳ ಮುಖಂಡರು ಹಾಗೂ ಸಂಘಟನೆಗಳ ಪ್ರತಿನಿಧಿಗಳು ಸಭೆಯಲ್ಲಿ ಭಾಗವಹಿಸಲಿದ್ದು, ಗದಗ ಸಭೆಯಲ್ಲಿ ಪಾಲ್ಗೊಳ್ಳುವ ಕುರಿತು ರೂಪುರೇಷೆಗಳನ್ನು ಚರ್ಚಿಸಲಾಗುತ್ತದೆ ಎಂದು ತಿಳಿಸಲಾಗಿದೆ. ಹೀಗಾಗಿ ಈ ಭಾಗದ ಸರ್ವ ಹಿಂದೂ ಸಮಾಜ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಸಭೆಯನ್ನು ಯಶಸ್ವಿಗೊಳಿಸಬೇಕು ಎಂದು ಹಿಂದೂ ಸಮಾಜದ ಸಂಘಟನೆಗಳ ಯುವ ಮುಖಂಡ ಈರಣ್ಣ ಪೂಜಾರ ಮನವಿ ಮಾಡಿದ್ದಾರೆ.

### ಶಿರಹಟ್ಟಿಯಲ್ಲಿ ಆತ್ಮ ಯೋಜನೆಯಡಿ ರೈತ ಸಲಹಾ ಸಮಿತಿ ಸಭೆ

# ಸಮತೋಲನ ಗೊಬ್ಬರ ಬಳಕೆಗೆ ರೈತರಿಗೆ ಸಲಹೆ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಆತ್ಮ ಯೋಜನೆಯಡಿ ರೈತ ಸಲಹಾ ಸಮಿತಿ ಸಭೆ ಹಾಗೂ ತಾಂತ್ರಿಕ ಸಭೆ ಶುಕ್ರವಾರ ಶಿರಹಟ್ಟಿಯ ಕೃಷಿ ಇಲಾಖೆಯ ಕಚೇರಿಯಲ್ಲಿ ನಡೆಯಿತು.

ಸಭೆಯಲ್ಲಿ ಮಾತನಾಡಿದ ಸಹಾಯಕ ಕೃಷಿ ನಿರ್ದೇಶಕ ಶಿವಕುಮಾರ ಕಾಶಪ್ಪನವರ, "ಸಸ್ಯಗಳ ಸಮರ್ಪಕ ಬೆಳವಣಿಗೆ ಮತ್ತು ಉತ್ತಮ ಇಳುವರಿಗೆ 16 ಪೋಷಕಾಂಶಗಳ ಅಗತ್ಯವಿದೆ. ಆದರೆ ರೈತರು ಕೇವಲ 2 ರಿಂದ 3 ಪೋಷಕಾಂಶಗಳನ್ನು ಮಾತ್ರ ಭೂಮಿಗೆ ಒದಗಿಸುತ್ತಿದ್ದಾರೆ. ಯಾವುದೇ ಒಂದು ಪೋಷಕಾಂಶದ ಕೊರತೆಯಾದರೂ ಬೆಳೆ ಸಮೃದ್ಧಿಯಾಗಿ ಬೆಳೆಯುವುದಿಲ್ಲ" ಎಂದು ಹೇಳಿದರು.



ರೈತರು ಕಾಲಕಾಲಕ್ಕೆ ಲಘು ಪೋಷಕಾಂಶಗಳನ್ನು ಭೂಮಿಗೆ ಒದಗಿಸಬೇಕು. ರಸಗೊಬ್ಬರಗಳ ಮಿತ ಬಳಕೆಯೊಂದಿಗೆ ಹೆಚ್ಚು ಕಾಂಪ್ಲೆಕ್ಸ್ ಗೊಬ್ಬರಗಳನ್ನು ಬಳಸಬೇಕು ಎಂದು ಸಲಹೆ ನೀಡಿದರು.

ಈ ವರ್ಷದ ಮುಂಗಾರು ಹಂಗಾಮಿನಲ್ಲಿ ಗೋವಿನ ಜೋಳದ ಬದಲಾಗಿ ಉದ್ದು ಬೆಳೆಯನ್ನು ಬೆಳೆಯುವಂತೆ ರೈತರಿಗೆ ಸೂಚಿಸಿದರು.

ಸಭೆಯಲ್ಲಿ ಸೀಮಾ ಸವಣೂರ, ಬಸವರಾಜ ನಾವಿ, ನೀಲನಗೌಡ್ರ ಪಾಟೀಲ, ಎಂ.ಎಸ್. ಪೂಜಾರ, ದೇವರಾಜ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಯುವ ಪ್ರತಿಭೆಗಳ ಬೆಳವಣಿಗೆಗೆ ಕ್ರೀಡೆ ಅಗತ್ಯ: ಪ್ರೊ. ವ್ಹಿ.ಎಚ್. ಕೊಳ್ಳಿ

# ಕಾಲೇಜಿಗೆ ವಾಲಿಬಾಲ್ ಕಿಟ್ ದಾನ

■ವಿಜಯಸಾಕ್ಷಿ ಸುದ್ದಿ, ಹುಲಕೋಟಿ

ವಿದ್ಯಾರ್ಥಿಗಳ ಸರ್ವಾಂಗೀಣ ಬೆಳವಣಿಗೆಯಲ್ಲಿ ಕ್ರೀಡೆ ಮಹತ್ವದ ಪಾತ್ರವಹಿಸುತ್ತದೆ ಎಂದು ಕೆಎಸ್‌ಎಸ್ ಪದವಿ ಕಾಲೇಜಿನ ನಿವೃತ್ತ ಗಣಿತಶಾಸ್ತ್ರ ಪ್ರಾಧ್ಯಾಪಕ ಹಾಗೂ ಆರ್ಟ್ ಆಫ್ ಗಿವಿಂಗ್ ಫೌಂಡೇಶನ್‌ನ ಗದಗ ಜಿಲ್ಲಾ ಸಂಯೋಜಕ ಪ್ರೊ. ವ್ಹಿ.ಎಚ್. ಕೊಳ್ಳಿ ಹೇಳಿದರು.

ಆರ್ಟ್ ಆಫ್ ಗಿವಿಂಗ್ ಫೌಂಡೇಶನ್ ವತಿಯಿಂದ ಹುಲಕೋಟಿಯ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ವಾಲಿಬಾಲ್ ಕಿಟ್ ದಾನ ಮಾಡಿ ಅವರು ಮಾತನಾಡಿದರು.





ಕ್ರೀಡೆ ವಿದ್ಯಾರ್ಥಿಗಳಲ್ಲಿ ಶಿಸ್ತು, ನಾಯಕತ್ವ ಹಾಗೂ ತಂಡ ಮನೋಭಾವ ಬೆಳೆಸುತ್ತದೆ. ಯುವ ವಿದ್ಯಾರ್ಥಿಗಳ ಬೌದ್ಧಿಕ ಹಾಗೂ ಭೌತಿಕ ಬೆಳವಣಿಗೆಗಾಗಿ ಫೌಂಡೇಶನ್ ಹಲವು ಸಮಾಜಮುಖಿ ಕಾರ್ಯಕ್ರಮಗಳನ್ನು ರೂಪಿಸಿದ್ದು, ಕ್ರೀಡಾ ಸಾಮಗ್ರಿಗಳ ದಾನವೂ ಅದರಲ್ಲಿ ಒಂದಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದ ಸಂಯೋಜಕ ಡಾ. ಅಪ್ಪಣ್ಣ ಹಂಜೆ ಮಾತನಾಡಿ, ಆರ್ಟ್ ಆಫ್ ಗಿವಿಂಗ್ ಫೌಂಡೇಶನ್ ಸಮಾಜದಲ್ಲಿ ಪ್ರೀತಿ, ದಯೆ, ಸಹಾನುಭೂತಿ ಹಾಗೂ ಮಾನವೀಯ ಮೌಲ್ಯಗಳನ್ನು ಬೆಳೆಸುವ ಕೆಲಸ ಮಾಡುತ್ತಿದೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯೆ ಡಾ. ಸುಧಾ ಕೌಜಗೇರಿ, ಭಾರತೀಯ ಸಂಸ್ಕೃತಿಯಲ್ಲಿ ದಾನದ ಮಹತ್ವ ಅಪಾರವಾಗಿದ್ದು, ಇಂತಹ ಕಾರ್ಯಗಳು ಸಮಾಜದಲ್ಲಿ ಸಾಮರಸ್ಯ ಬೆಳೆಸುತ್ತವೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಪ್ರಾಧ್ಯಾಪಕರು, ವಿದ್ಯಾರ್ಥಿಗಳು ಹಾಗೂ ಫೌಂಡೇಶನ್ ಪದಾಧಿಕಾರಿಗಳು ಉಪಸ್ಥಿತರಿದ್ದರು.

### ಡಂಬಳದಲ್ಲಿ ಅಂತಾರಾಷ್ಟ್ರೀಯ ಜೀವವೈವಿಧ್ಯ ದಿನಾಚರಣೆ

# ಜೀವವೈವಿಧ್ಯ ಉಳಿದರೆ ಮನುಕುಲ ಉಳಿಯುತ್ತದೆ

■ವಿಜಯಸಾಕ್ಷಿ ಸುದ್ದಿ, ಡಂಬಳ

ಭೂಮಿಯ ಮೇಲಿನ ನೈಸರ್ಗಿಕ ಜೀವಸಂಕುಲ ರಕ್ಷಣೆ ಹಾಗೂ ಪರಿಸರ ಸಮತೋಲನ ಕಾಪಾಡುವುದು ಪ್ರತಿಯೊಬ್ಬರ ಹೊಣೆಗಾರಿಕೆಯಾಗಿದೆ ಎಂದು ಡಂಬಳ ಗ್ರಾಮ ಪಂಚಾಯತಿ ಆಡಳಿತಾಧಿಕಾರಿ ಗುರುರಾಜ ಚವ್ಹಾಣ ಹೇಳಿದರು.

ಡಂಬಳ ಗ್ರಾಮದಲ್ಲಿ ಶುಕ್ರವಾರ ಅಂತಾರಾಷ್ಟ್ರೀಯ ಜೀವವೈವಿಧ್ಯ ದಿನಾಚರಣೆಯ ಅಂಗವಾಗಿ ಗ್ರಾಮ ಪಂಚಾಯತಿ ಹಾಗೂ ಅಹಿಂದ ಜನತಾ ಸಂಘದ ಸಹಯೋಗದಲ್ಲಿ ಗ್ರಾಮ ಪಂಚಾಯತಿ ಆವರಣದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಸಸಿ ನೆಡುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಅರಣ್ಯನಾಶ ಮತ್ತು ಹವಾಮಾನ ಬದಲಾವಣೆಯಿಂದ ಲಕ್ಷಾಂತರ ಜೀವ ಪ್ರಭೇದಗಳು ಅಳಿವಿನಂಚಿನಲ್ಲಿವೆ. ಪ್ರಾಣಿ ಹಾಗೂ ಸಸ್ಯ ಸಂಕುಲ ಸೇರಿದಂತೆ ಜೀವವೈವಿಧ್ಯ ಸಂರಕ್ಷಣೆ ಕುರಿತು ಜನಸಾಮಾನ್ಯರಲ್ಲಿ ಜಾಗೃತಿ ಮೂಡಿಸುವ ಅಗತ್ಯವಿದೆ ಎಂದು ಹೇಳಿದರು.

ಮುಖ್ಯ ಅತಿಥಿಯಾಗಿ ಮಾತನಾಡಿದ ತಾಲ್ಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಉಪಾಧ್ಯಕ್ಷ ಲಕ್ಷ್ಮಣ ದೊಡ್ಡಮನಿ, "ಜೀವವೈವಿಧ್ಯ ಎನ್ನುವುದು ಕೇವಲ ಕಾಡುಪ್ರಾಣಿಗಳಿಗೆ ಸಂಬಂಧಪಟ್ಟ ವಿಷಯವಲ್ಲ. ಅದು ಮನುಕುಲದ ಅಸ್ತಿತ್ವದ ಪ್ರಶ್ನೆಯಾಗಿದೆ.

ಶುದ್ಧ ಗಾಳಿ, ನೀರು ಹಾಗೂ ಆಹಾರಕ್ಕಾಗಿ ನಾವು ಪ್ರಕೃತಿಯ ಸಮತೋಲನದ ಮೇಲೆ ಅವಲಂಬಿತರಾಗಿದ್ದೇವೆ" ಎಂದು ಹೇಳಿದರು.

ರಾಜ್ಯದಲ್ಲಿ ಎರಡು ದಶಕಗಳಿಂದ ಜೀವವೈವಿಧ್ಯ ಸಂರಕ್ಷಣಾ ಕಾಯ್ದೆ ಜಾರಿಯಲ್ಲಿದ್ದರೂ ಅನುಷ್ಠಾನದಲ್ಲಿ ಅರಣ್ಯ ಇಲಾಖೆ ವಿಫಲವಾಗಿದೆ ಎಂದು ಅಭಿಪ್ರಾಯಪಟ್ಟರು.



> "ಜೀವವೈವಿಧ್ಯ ಸಂರಕ್ಷಣೆ ಕೇವಲ ಸರ್ಕಾರದ ಹೊಣೆಗಾರಿಕೆ ಅಲ್ಲ. ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯಾಗಿದೆ."
> **–ಗುರುರಾಜ ಚವ್ಹಾಣ, ಆಡಳಿತಾಧಿಕಾರಿ**

ಅಹಿಂದ ಜನತಾ ಸಂಘದ ಅಧ್ಯಕ್ಷ ಪ್ರಕಾಶ ಮೇಗೂರ ಹಾಗೂ ಪ್ರಧಾನ ಕಾರ್ಯದರ್ಶಿ ಗೋಪಾಲ ಗದಗಿನ ಪ್ರಾಸ್ತಾವಿಕವಾಗಿ ಮಾತನಾಡಿ, ಪ್ಲಾಸ್ಟಿಕ್ ಮುಕ್ತ ಪರಿಸರ ನಿರ್ಮಾಣಕ್ಕೆ ಎಲ್ಲರೂ ಕೈಜೋಡಿಸಬೇಕು.

ಶಾಲಾ-ಕಾಲೇಜುಗಳಲ್ಲಿ ವನ್ಯಜೀವಿ ಹಾಗೂ ಪರಿಸರ ಸಂರಕ್ಷಣೆಯ ಬಗ್ಗೆ ಜಾಗೃತಿ ಶಿಕ್ಷಣ ನೀಡಬೇಕು ಎಂದು ಹೇಳಿದರು. ವಿಜ್ಞಾನ, ತಂತ್ರಜ್ಞಾನ ಹಾಗೂ ಜನಸಾಮಾನ್ಯರ ಸಹಭಾಗಿತ್ವದಿಂದ ಮಾತ್ರ ಜೀವವೈವಿಧ್ಯ ಉಳಿಸಿಕೊಳ್ಳಲು ಸಾಧ್ಯ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗುರುರಾಜ ಚವ್ಹಾಣ ವಹಿಸಿದ್ದರು.

ತಾಲ್ಲೂಕು ಯೋಜನಾಧಿಕಾರಿ ವಿಜಯಕುಮಾರ ಬೆಣ್ಣಿ, ಪಿಡಿಒ ಪಾರ್ವತಿ ಹೊಂಬಳ, ಕಾರ್ಯದರ್ಶಿ ಚಾಂದಮುನ್ನಿ ಅಣ್ಣಿಗೇರಿ ಸೇರಿದಂತೆ ಗ್ರಾಮ ಪಂಚಾಯತಿ ಸಿಬ್ಬಂದಿ ಹಾಗೂ ಸಂಘದ ಪದಾಧಿಕಾರಿಗಳು ಭಾಗವಹಿಸಿದ್ದರು.

### ಗದಗ ಜಿಲ್ಲೆಯಲ್ಲಿ ಮಧ್ಯಂತರ ಬರ ಸಾಧ್ಯತೆ; ರೈತರಿಗೆ ಕೃಷಿ ಇಲಾಖೆ ಮುನ್ನೆಚ್ಚರಿಕೆ ಸೂಚನೆ

# ಮುಂಗಾರಿಗೆ 'ಎಲ್ ನಿನೋ' ಎಫೆಕ್ಟ್ ಭೀತಿ!

■ವಿಜಯಸಾಕ್ಷಿ ಸುದ್ದಿ, ಗದಗ

ಮುಂಗಾರು ಹಂಗಾಮು 2026ರಲ್ಲಿ ಎಲ್ ನಿನೋ ಪರಿಣಾಮದಿಂದ ಮಳೆಯ ಕೊರತೆ ಹಾಗೂ ಮಧ್ಯಂತರ ಬರ ಪರಿಸ್ಥಿತಿ ಎದುರಾಗುವ ಸಾಧ್ಯತೆ ಇರುವ ಹಿನ್ನೆಲೆಯಲ್ಲಿ ರೈತರು ಮುನ್ನೆಚ್ಚರಿಕಾ ಕೃಷಿ ಕ್ರಮಗಳನ್ನು ಅನುಸರಿಸಬೇಕು ಎಂದು ಕೃಷಿ ಇಲಾಖೆ ಸೂಚನೆ ನೀಡಿದೆ.

ಗದಗ ಜಿಲ್ಲೆಯಲ್ಲಿ ಮೇ 19ರವರೆಗೆ ಪೂರ್ವ ಮುಂಗಾರು ವಾಡಿಕೆಯಂತೆ 72.50 ಮಿ.ಮೀ. ಮಳೆಯಾಗಬೇಕಿದ್ದರೆ, ಈಗಾಗಲೇ 105.70 ಮಿ.ಮೀ. ಮಳೆಯಾಗಿ ಶೇ.46ರಷ್ಟು ಅಧಿಕ ಮಳೆಯಾಗಿದೆ. ಆದರೂ ಮುಂದಿನ ದಿನಗಳಲ್ಲಿ ಮಳೆಯ ವ್ಯತ್ಯಾಸ ಸಂಭವಿಸುವ ಸಾಧ್ಯತೆ ಕುರಿತು ವಿಜ್ಞಾನಿಗಳು ಎಚ್ಚರಿಕೆ ನೀಡಿದ್ದಾರೆ.

ಮುಂಗಾರು ಹಂಗಾಮಿನಲ್ಲಿ ಕೃಷಿಯಲ್ಲಿ ತುರ್ತು ಪರಿಸ್ಥಿತಿಗಳನ್ನು ಸಮರ್ಥವಾಗಿ ಎದುರಿಸುವ ಕುರಿತು ಮೇ 14ರಂದು ಕೃಷಿ ಆಯುಕ್ತರ ಅಧ್ಯಕ್ಷತೆಯಲ್ಲಿ ವಿಡಿಯೋ ಸಂವಾದ ಸಭೆ ನಡೆಯಿತು. ಈ ವೇಳೆ ಕೇಂದ್ರೀಯ ಒಣ ಬೇಸಾಯ ಸಂಶೋಧನಾ ಸಂಸ್ಥೆ, ಹೈದರಾಬಾದ್‌ನ ವಿಜ್ಞಾನಿಗಳು ಗದಗ ಜಿಲ್ಲೆಯಲ್ಲಿ ಮುಂಗಾರು ತಡವಾಗಿ ಆರಂಭವಾಗುವ ಅಥವಾ ಮಧ್ಯಂತರ ಬರ ಉಂಟಾಗುವ ಸಾಧ್ಯತೆಯನ್ನು ವಿವರಿಸಿದರು.





ಜುಲೈ ಹಾಗೂ ಆಗಸ್ಟ್ ತಿಂಗಳಲ್ಲಿ ಶೇ.50ರಷ್ಟು ತೇವಾಂಶ ಕೊರತೆ ಉಂಟಾಗಿ ಬೆಳೆ ಉತ್ಪಾದನೆ ಕಡಿಮೆಯಾಗುವ ಸಾಧ್ಯತೆ ಇದೆ ಎಂದು ತಿಳಿಸಿದರು.

**ರೈತರಿಗೆ ಕೃಷಿ ತಜ್ಞರ ಸಲಹೆಗಳು :** ಬಿತ್ತನೆಗೂ ಮುನ್ನ ರೈತರು ಮಣ್ಣಿನ ಪರೀಕ್ಷೆ ಮಾಡಿಸಿ, ಬೆಳೆಗಳ ಅಗತ್ಯಕ್ಕೆ ಅನುಗುಣವಾಗಿ ಪೋಷಕಾಂಶ ಬಳಕೆ ಮಾಡಬೇಕು. ಕಡಿಮೆ ಅವಧಿಯ ಹಾಗೂ ಬರ ತಾಳುವ ತಳಿಗಳ ಆಯ್ಕೆ, ಅಂತರ ಬೆಳೆ ಪದ್ಧತಿ, ಮಲ್ಚಿಂಗ್, ಮಳೆ ನೀರು ಸಂಗ್ರಹಣೆ, ತಡ ಬಿತ್ತನೆಗೆ ಪರ್ಯಾಯ ಬೆಳೆ ಯೋಜನೆಗಳನ್ನು ಅನುಸರಿಸಬೇಕು ಎಂದು ಸಲಹೆ ನೀಡಲಾಗಿದೆ.

ಮಳೆ ಕೊರತೆಯ ಸಂದರ್ಭದಲ್ಲಿ ಹೆಚ್ಚು ಯೂರಿಯಾ ಬಳಕೆ ತಪ್ಪಿಸಬೇಕು. ಮಳೆ ಬಂದ ನಂತರ ನ್ಯಾನೋ ಯೂರಿಯಾ ಸಿಂಪರಣೆ ಮೂಲಕ ಬೆಳೆ ಪುನರುಜ್ಜೀವನ ಕೈಗೊಳ್ಳಬಹುದು ಎಂದು ತಜ್ಞರು ತಿಳಿಸಿದ್ದಾರೆ.

> "ಎಲ್ ನಿನೋ ಪರಿಣಾಮದಿಂದ ಮಳೆಯ ವ್ಯತ್ಯಾಸ ಸಂಭವಿಸುವ ಸಾಧ್ಯತೆ ಇದೆ. ರೈತರು ಮುನ್ನೆಚ್ಚರಿಕಾ ಕೃಷಿ ಕ್ರಮಗಳನ್ನು ಅನುಸರಿಸಿದರೆ ನಷ್ಟವನ್ನು ತಗ್ಗಿಸಬಹುದು."
> **– ಕೃಷಿ ಇಲಾಖೆ ಅಧಿಕಾರಿಗಳು**

ಹಂಗಾಮಿನ ಮಧ್ಯದಲ್ಲಿ ಮಳೆ ಪ್ರಮಾಣ ಕಡಿಮೆಯಾದರೆ ಪ್ರತಿ ಮೂರನೇ ಸಾಲನ್ನು ತೆಗೆಯುವುದು, ಪೊಟ್ಯಾಶಿಯಂ ನೈಟ್ರೇಟ್ ಅಥವಾ 19:19:19 ಸಿಂಪರಣೆ, ಜೀವಾಮೃತ ಹಾಗೂ ವರ್ಮಿವಾಶ್ ಬಳಕೆ, ಕೆಯೋಲಿನ್ ಸಿಂಪರಣೆ ಕೈಗೊಳ್ಳಲು ಸಲಹೆ ನೀಡಲಾಗಿದೆ.

ನೀರು ಲಭ್ಯವಿದ್ದಲ್ಲಿ ಹನಿ ಅಥವಾ ತುಂತುರು ನೀರಾವರಿ ಮೂಲಕ ಜೀವರಕ್ಷಕ ನೀರಾವರಿ ನೀಡಬೇಕು. ಉಳಿದ ತೇವಾಂಶವನ್ನು ಮುಂದಿನ ಬೆಳೆಗಾಗಿ ಸಂರಕ್ಷಿಸಬೇಕು ಎಂದು ತಿಳಿಸಲಾಗಿದೆ.

ಜಿಲ್ಲೆಯ ರೈತರು ಕೃಷಿ ಇಲಾಖೆಯ ಸಲಹೆಗಳನ್ನು ಅನುಸರಿಸಿ ಮುಂಗಾರು ಹಂಗಾಮಿಗೆ ಸಜ್ಜಾಗಬೇಕು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


**ಗದಗ-ಬೆಟಗೇರಿ ನಗರಸಭೆ ಕಾರ್ಯಾಲಯ-582101**
ಜಿಲ್ಲಾ: ಗದಗ ರಾಜ್ಯ : ಕರ್ನಾಟಕ
ದೂ:08372-259932 ಇ-ಮೇಲ್ : ka.gadag.betageri.cmc@gmail.com
ನಂ.ಗಬೆನಸ/ತಾಂ.ವಿ/ನಗರಸಭೆ.ಅನುದಾನ/ವಹಿ/ಟೆಂಡರ್/137/2026-27 ದಿನಾಂಕ:21-05-2026

**ಟೆಂಡರ್ ಪ್ರಕಟಣೆ**

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯ ಪಾರದರ್ಶಕತೆ ಅಧಿನಿಯಮ 1999-2000ರ ಪ್ರಕಾರ ಸ್ಟ್ಯಾಂಡರ್ಡ್ ಟೆಂಡರ್ ಡಾಕ್ಯೂಮೆಂಟ್ಸ್ ನಿಯಮದನ್ವಯ ಗದಗ-ಬೆಟಗೇರಿ ನಗರಸಭೆಯ ಸನ್ 2026-27ನೇ ಸಾಲಿನ ನಗರಸಭೆ ಅನುದಾನದಲ್ಲಿ ತಯಾರಿಸಿದ ಒಟ್ಟು-32 ಕಾಮಗಾರಿಗಳ ಟೆಂಡರ್ ಆಹ್ವಾನಿಸಿದ್ದು, ಆಸಕ್ತರು ಇ-ಸಂಗ್ರಹಣಾ ವೇದಿಕೆಯಡಿ,

| | |
|---|---|
| INDENT No- Others- | 58181,58183,58188,58189,58191,58193,58195, 58196,58197,58210,58214,58217,58220,58223, 58226,58240,58242,58243,58246, |
| INDENT No-SC- | 58209,58212,58236,58238,58245,58247 |
| INDENT No-ST- | 58213, |
| CAT-I | 58199,58228, |
| (CAT-II)A | 58186,58192,58198,58237 |

ಗಳಿಗೆ http://kppp.karnataka.gov.in ರಲ್ಲಿ ಸಂಪರ್ಕಿಸಿ ಟೆಂಡರ್ ಸಲ್ಲಿಸಬಹುದಾಗಿದೆ. ಬಿಡ್‌ದಾರರು ಟೆಂಡರ್ ವಿವರಗಳನ್ನು ಕೆ.ಪಿ.ಪಿ. ಪೋರ್ಟಲ್‌ನಲ್ಲಿ ಪಡೆದು, ಸಂಬಂಧಿಸಿದ ಇಎಂಡಿ ಟೆಂಡರ್ ಫೀಗಳನ್ನು Electronic ಪದ್ಧತಿಯಲ್ಲಿ ತುಂಬಿ ಈ ಕೆಳಗೆ ನಿಗದಿ ಪಡಿಸಿದ ದಿನಾಂಕಗಳಂದು ಟೆಂಡರ್ ಸಲ್ಲಿಸಬಹುದಾಗಿದೆ.

| | |
|---|---|
| ಟೆಂಡರ್ ಸಲ್ಲಿಸುವ ಕೊನೆಯ ದಿನಾಂಕ ಮತ್ತು ಸಮಯ | 17.06.2026 Up to 16.00 Hour |
| ತಾಂತ್ರಿಕ ಬಿಡ್‌ಗಳನ್ನು ತೆರೆಯುವ ದಿನಾಂಕ ಮತ್ತು ಸಮಯ (Technical Bids) | 18.06.2026 Up to 16.30 Hour |

ಸದರಿ ಟೆಂಡರ್‌ಗೆ ಸಂಬಂಧಿಸಿದ ದಿನಾಂಕ ಹಾಗೂ ಇತರೆ ಬದಲಾವಣೆಗಳಾದಲ್ಲಿ KPPP PORTAL ನಲ್ಲಿ ಪ್ರಕಟಿಸಲಾಗುವುದು, ಪತ್ರಿಕಾ ಪ್ರಕಟಣೆಯಲ್ಲಿ ಪ್ರಕಟಿಸಲಾಗುವುದಿಲ್ಲ.

ಸಹಿ/- ಪೌರಾಯುಕ್ತರು
ನಗರಸಭೆ ಗದಗ ಬೆಟಗೇರಿ

ವಾ.ಸಾ.ಸಂ.ಇ/ಗದಗ/86/ದೇಶಪಾಂಡೆಪಬ್ಲಿಸಿಟಿ/2026-27


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka